# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 149 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 25–12–2023 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 01 Issue - 149 | Title- Code: KARKAN 28269 | Chitradurga | Date: 25-12-2023 Monday | Page: 4 | Price: Rs. 2-00



ಒಳಪುಟದ ಸುದ್ದಿಗಳು
ರಾಷ್ಟ್ರಮಟ್ಟದಲ್ಲಿ ಬೆಣ್ಣೆದೋಸೆಗೆ ಬ್ರಾಂಡಿಂಗ್ ಗುರಿ ಜಿಲ್ಲಾಧಿಕಾರಿ ಡಾ.ವೆಂಕಟೇಶ್.ಎಂ.ವಿ 2
ತಾಲ್ಲೂಕಿನ ದೊಡ್ಡ ಉಲ್ಲಾರ್ತಿಯಲ್ಲಿ ಕರಡಿ ದಾಳಿ ಮಹಿಳೆಗೆ ಗಾಯ: ಆಸ್ಪತ್ರೆ ದಾಖಲು 3
ಶಿಕ್ಷಣ ಇಲಾಖೆಯ ಅಭಿವೃದ್ಧಿಗೆ ಸರ್ಕಾರವೇ ಅಡ್ಡಗಾಲು: ನಾರಾಯಣಸ್ವಾಮಿ 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

"ನಗದು" ಇಲ್ಲದವರು ಬಡವರಲ್ಲ.... "ನಗದೇ" ಇರುವವರು ನಿಜವಾದ ಬಡವರು...

» ಶುಭೋದಯ

# ಚಿತ್ರದುರ್ಗ ಜಿಲ್ಲೆ ಅಭಿವೃದ್ಧಿಗೆ 371ಜೆ ವಿಶೇಷ ಸ್ಥಾನಮಾನ ಅಗತ್ಯ: ವಾಲ್ಮೀಕಿ ಶ್ರೀ







» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲೆಯ ಮೂರು ತಾಲೂಕು ಮತ್ತು ದಾವಣಗೆರೆ ಜಿಲ್ಲೆಯ ಜಗಳೂರು ತಾಲೂಕನ್ನು ಕಲ್ಯಾಣ ಕರ್ನಾಟಕ ಮಾದರಿ 371ಜೆ ವಿಶೇಷ ಸ್ಥಾನ ನೀಡಿದೆ ಅಭಿವೃದ್ಧಿ ಅನುಕೂಲವಾಗುತ್ತದೆ ಎಂದು ಎಂದು ರಾಜನಹಳ್ಳಿ ಶ್ರೀ ವಾಲ್ಮೀಕಿ ಗುರು ಪೀಠದ ಶ್ರೀ ಜಗದ್ಗುರು ಪ್ರಸನ್ನಾನಂದಪುರಿ ಸ್ವಾಮೀಜಿ ಹೇಳಿದರು.

ನಗರದ ತರಾಸು ರಂಗಮಂದಿರದಲ್ಲಿ ಚಿತ್ರದುರ್ಗ ವಾಲ್ಮೀಕಿ ನಾಯಕ ನೌಕರರ ಕ್ಷೇಮಾಭಿವೃದ್ಧಿ ಮತ್ತು ಸಾಂಸ್ಕೃತಿಕ ಸಂಘ ಚಿತ್ರದುರ್ಗ ಇವರ ಸಂಯುಕ್ತಾಶ್ರಯದಲ್ಲಿ ವಾಲ್ಮೀಕಿ ನಾಯಕ ನೌಕರರ ಸಮಾವೇಶ , ಪ್ರತಿಭಾ ಪುರಸ್ಕಾರ ಮತ್ತು ಸಾಧಕರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಆಶೀರ್ವಚನೆ ನೀಡಿದರು.

ಕಲ್ಯಾಣ ಕರ್ನಾಟಕ ಜಿಲ್ಲೆಗಳಂತೆ 371 ಜೆ ಅಡಿಯಲ್ಲಿ ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ, ಚಿತ್ರದುರ್ಗ , ಮೊಳಕಾಲ್ಮುರು, ದಾವಣಗೆರೆ ಜಿಲ್ಲೆಯ ಜಗಳೂರನ್ನು ಸೇರ್ಪಡೆ ಮಾಡುವ ಕೆಲಸ ಆಗಬೇಕಿದೆ. 371ಜೆ ಸ್ಥಾನದೊಂದಿಗೆ ಕೇಂದ್ರದಿಂದ ವಿಶೇಷ ಅನುದಾನ ದೊರೆತರೆ, ಈ ಜಿಲ್ಲೆಗಳ ನಾಯಕ ಸಮುದಾಯದ ಜನರ ಅಭಿವೃದ್ಧಿಗೂ ಸಹಕಾರಿಯಾಗಲಿದೆ. ರಾಜನಹಳ್ಳಿ ವಾಲ್ಮೀಕಿ ಜಾತ್ರಾಮಹೋತ್ಸವದಲ್ಲಿ ಈ ಕುರಿತಂತೆ ಸರ್ಕಾರಗಳನ್ನು ಒತ್ತಾಯಿಸಲಾಗುವುದು ಎಂದರು.

ಅಯೋಧ್ಯೆಯಲ್ಲಿ ಶ್ರೀ ರಾಮಮಂದಿರ ಉದ್ಘಾಟನೆಯಾಗುತ್ತಿರುವ ಸಂದರ್ಭದಲ್ಲಿ ಶ್ರೀರಾಮಾಯಣ ರಚಿಸಿದ ಶ್ರೀ ಮಹರ್ಷಿ ವಾ ಲ್ಮೀಕಿ, ಬೇಡರಕಣ್ಣಪ್ಪ ಹಾಗೂ ಏಕಲವ್ಯರಿಗೆ ಈ ದೇಶದಲ್ಲಿ ಸೂಕ್ತ ಪುರಸ್ಕಾರ ಸಿಕ್ಕಿಲ್ಲ ಎಂಬ ಬೇಸರ ಹೊರ ಹಾಕಿದರು.ರಾಜ್ಯ ಸರ್ಕಾರ ಕೆಲವು ವರ್ಷಗಳಿಂದ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ ಮಾಡಿಕೊಂಡು ಬರುತ್ತಿದೆ. ಕಳೆದ ಚುನಾವಣೆ ಸಂದರ್ಭದಲ್ಲಿ ಚಿತ್ರದುರ್ಗದಲ್ಲಿ ರಾಜವೀರ ಮದಕರಿ ನಾಯಕರ ಥೀಮ್‌ಪಾರ್ಕ್ ಆರಂಭಿಸುವುಗಿ ಕೇಂದ್ರದ ಗೃಹ ಮಂತ್ರಿಗಳಾದ ಅಮಿತ್‌ಶಾ ಅವರ ಭರವಸೆ ಈಡೇರಿಲ್ಲ ಎಂದು ಕುಟುಕಿದರು.ನಾಯಕ ಸಮಾಜದ ಅಭಿವೃದ್ಧಿಯ ಪಥದಲ್ಲಿ ಸಾಗುತ್ತಿದೆ. ನಮಗೆ ಡಾ.ಬಿ.ಆರ್.ಅಂಬೇಡ್ಕರ್ ಅವರು ನೀಡಿದ ಮೀಸಲಾತಿ ಮೂಲಕ ಶೋಷಿತ ಸಮುದಾಯಗಳಿಗೆ ಪ್ರಾತಿನಿಧ್ಯ ನೀಡುವ ಕೆಲಸ ಮಾಡಿದರು. ಆದರೆ ರಾಜ್ಯದಲ್ಲಿ ಅತ್ಯಧಿಕ ನಕಲಿ ಪ್ರಮಾಣ ಪತ್ರದ ಹಾವಳಿ ಹೆಚ್ಚುತ್ತಿದೆ. ಕೆಲವರು ಎಸ್‌ಸಿ, ಎಸ್‌ಟಿ ಜನರ ಸೌಲಭ್ಯಗಳನ್ನು ಕಬಳಿಕೆ ಮಾಡುತ್ತಿದ್ದು ಈ ಬಗ್ಗೆ ಸಮುದಾಯ ಎಚ್ಚರ ವಹಿಸದಿದ್ದರೆ ಮುಂದಿನ ದಿನಗಳಲ್ಲಿ ಅದರ ಪರಿಣಾಮ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದ ಮೀಸಲು ಪ್ರಮಾಣ ಹೆಚ್ಚಾಗಿದ್ದು ಇದಕ್ಕೆ ಪೂರಕ ಕ್ರಮಗಳನ್ನು ತೆಗೆದುಕೊಳ್ಳುವುದಾಗಿ ಕರ್ನಾಟಕ ಸರ್ಕಾರ ಭರವಸೆ ನೀಡಿದೆ. ಮೀಸಲು ಹೆಚ್ಚಳ ಬೇಡಿಕೆಗೆ ಅಡ್ಡಿಯಾಗಿದ್ದ ಕಾನೂನು ತೊಡಕು ಅರ್ಜಿ ಹಾಕದಿದ್ದರು ಸಹ ಸಮುದಾಯಕ್ಕೆ ಶೇ 10% ಮೀಸಲು ನೀಡಲು ಯಾವುದು ಅಡ್ಡಿ ಆತಂಕಗಳು ಎದುರಾಗಲಿಲ್ಲ ಎಂದು ಸ್ವಾಮೀಜಿ ಅಸಮಾಧಾನ ವ್ಯಕ್ತಪಡಿಸಿದರು.

ಶ್ರೀಗಳುಸಮಾಜ ಸಂಘಟಿತವಾಗ ಬೇಕು ಎಂದು ಹೇಳಿದರು.

ಕಾರ್ಯಕ್ರಮ ಉದ್ಘಾಟಿಸಿದ ಮಾತನಾಡಿದ ಮೊಳಕಾಲ್ಮೂರು ಶಾಸಕ ಎನ್.ವೈ.ಗೋಪಾಲಕೃಷ್ಣ ಅವರು ಮಾತನಾಡಿ ಚಿತ್ರದುರ್ಗಕ್ಕೆ 371 ಜೆ ಸ್ಥಾನ ಸಿಗಬೇಕಿದೆ. ಈ ನಿಟ್ಟಿ ನಲ್ಲಿ ಚಳ್ಳಕೆರೆ, ಮೊಳಕಾಲ್ಮೂರು ತಾಲೂಕುಗಳಲ್ಲಿ ನಡೆಯುತ್ತಿರುವ ಸಮೀಕ್ಷೆ ಚಿತ್ರದುರ್ಗ ಮತ್ತಿತರೆಡೆ ನಡೆಯ ಬೇಕು. ಬೇಡಿಕೆ ಈಡೇರಿಕೆ ಗಾಗಿ ಸರ್ಕಾರಗಳ ಮೇಲೆ ಒತ್ತಡ ಹಾಕಬೇಕು ಎಂದರು.

ನ್ಯಾಯಮೂರ್ತಿ ಎನ್.ವೈ. ಹನುಮಂತಪ್ಪ ಅವರ ಪರವಾಗಿ ಜೀವಮಾನ ಸಾಧನೆ ಪ್ರಶಸ್ತಿಯನ್ನು ಅವರ ಪರವಾಗಿ ಅನು ಸ್ವೀಕರಿಸುತ್ತಿರುವುದು ಸಂತಸ ತಂದಿದೆ. ರಾಜ್ಯ ಸರ್ಕಾರದ ರಾಜ್ಯ ವಾಲ್ಮೀಕಿ ಪ್ರಶಸ್ತಿಗೆ ಭಾಜನರಾಗಿದ್ದ ಎನ್. ವೈ ಹನುಮಂತಪ್ಪ ಅವರಿಗೆ ಸಿಕ್ಕಿದ್ದು ಅವರ ಸೇವೆಗೆ ತಂದ ದೊಡ್ಡ ಗೌರವವಾಗಿದೆ. ಎನ್.ವೈ.ಹನುಮಂತಪ್ಪ ಅವರಿಗೆ ವಾಲ್ಮೀಕಿ ಪ್ರಶಸ್ತಿಯಿಂದ ದೊರೆತಿರುವ 5 ಲಕ್ಷ ಮೊತ್ತವನ್ನು ವಾಲ್ಮೀಕಿ ಸಮಾಜದ ವ್ಯಕ್ತಿತ್ವ ವಿಕಾಸಕ್ಕೆ ನೀಡಲಾಗುತ್ತದೆ ಎಂದರು.

ಸಚಿವ ಸತೀಶ್‌ಜಾರಕಿಹೊಳಿ ಅವರ ಪುತ್ರ ರಾಹುಲ್‌ಜಾರಕಿಹೊಳಿ ಮಾತನಾಡಿಸರ್ಕಾರಿ ನೌಕರರ ಸಂಘದಿಂದ ಏರ್ಪಡಿಸಿರುವ ಈ ಕಾರ್ಯಕ್ರಮ ಅರ್ಥಪೂರ್ಣವಾಗಿದೆ. ಒಂದು ಸರ್ಕಾರ ಉತ್ತಮ ಆಡಳಿತ ನಡೆಯಲು ಸರ್ಕಾರಿ ನೌಕರರು ಪಾತ್ರ ದೊಡ್ಡದು.ಸಮಾಜ ಪರ ಕಾಳಜಿಯಿಂದ ಕಳೆದ 12 ವರ್ಷಗಳಿಂದ ಸರ್ಕಾರಿ ನೌಕರರ ಸಂಘದಿಂದ ಪ್ರತಿಭಾ ಪುರಸ್ಕಾರ ಮೂಲಕ ವಿದ್ಯಾರ್ಥಿಗಳನ್ನು ಪ್ರೋತ್ಸಾಹ ನೀಡುವ ಕೆಲಸ ಮಾಡುತ್ತಿರುವುದು ನನಗೆ ಸಂತಸ ತಂದಿದೆ ಎಂದರು.

ಸಮಾಜದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದವರನ್ನು ಗುರುತಿಸಿ ಸಾಧಕರನ್ನು ಸನ್ಮಾನಿಸಿ ಯುವ ಸಮೂಹಕ್ಕೆ ಸ್ಫೂರ್ತಿ ತುಂಬುತ್ತಿರುವುದು ಭವಿಷ್ಯದ ದೃಷ್ಟಿಯಿಂದ ಉತ್ತಮ ಬೆಳವಣಿಗೆಯಾಗಿದೆ.


ಪ್ರಸ್ತುತ ದಿನಗಳಲ್ಲಿ ನಮ್ಮ ಸಮಾಜಕ್ಕೆ ಮೀಸಲಾತಿಯಿಂದ ಅಧಿಕಾರ ದೊರತಿದೆ. ಅನೇಕ ನಾಯಕರು ಸಮಾಜದ ಪರವಾಗಿ ಕೆಲಸ ಮಾಡಲು ಸಹಕಾರಿಯಾಗಿದ್ದು ಸಮಾಜದ ಪರವಾಗಿ ನಿಂತು ಸಮಾಜವನ್ನು ಉನ್ನತ ಮಟ್ಟಕ್ಕೆ ಕೊಂಡೊಯ್ಯಲು ಮತ್ತಷ್ಟು ಶ್ರಮ ಹಾಕಬೇಕು.

ಎಲ್ಲಾ ಸಮಾಜಗಳು ಸಾಮಾಜಿಕವಾಗಿ ಬಲಿಷ್ಠವಾಗಲು ಬೆಳೆಯಲು ಶಿಕ್ಷಣದಿಂದ ಮಾತ್ರ ಸಾಧ್ಯವಾಗುತ್ತದೆ. ವಿದ್ಯಾರ್ಥಿಗಳು ಉತ್ತಮ ಶಿಕ್ಷಣವನ್ನು ನೀಡುವ ಕೆಲಸ ಮಾಡಬೇಕು.

ಪುಟ ↘ 2

## ಫಾಸ್ಟ್ ನ್ಯೂಸ್

### ಒಂದೇ ದಿನ 104 ಜನಕ್ಕೆ ಕೋವಿಡ್ ಪಾಸಿಟಿವ್



» **ಬೆಂಗಳೂರು**

ರಾಜ್ಯದಲ್ಲಿ ಇಂದು 104 ಜನರಿಗೆ ಕೊರೊನಾ ಸೋಂಕು ದೃಢಪಟ್ಟಿದ್ದು, ಅದರಲ್ಲಿ ಬೆಂಗಳೂರಿ ನಲ್ಲಿಯೇ ಬರೊಬ್ಬರಿ 85 ಜನರಿಗೆ ಕೊರೊನಾ ಸೋಂಕು ಹರಡಿದೆ. ಈ ಮೂಲಕ ಒಟ್ಟು ಕೊರೊನಾ ಸೋಂಕಿತರ ಸಂಖ್ಯೆ 271ಕ್ಕೆ ಏರಿಕೆ ಆಗಿದೆ. ಕಳೆದ 24 ಗಂಟೆಯಲ್ಲಿ 8 ಸೋಂಕಿತರು ಗುಣಮುಖರಾಗಿ ಡಿಸ್ಚಾರ್ಜ್ ಆಗಿದ್ದಾರೆ. ಈ ಹಿನ್ನಲೆ ರಾಜ್ಯದಲ್ಲಿ ಕೊರೊನಾ ಪಾಸಿಟಿವಿಟಿ ಪ್ರಮಾಣ ಶೇಕಡಾ 5.93ರಷ್ಟಿದೆ ಎಂದು ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮಾಹಿತಿ ನೀಡಿದೆ.


**ಕೇರಳದ ಗಡಿಯಲ್ಲಿ ಎಚ್ಚರಿಕೆ ಕ್ರಮ:** ಕೊರೊನಾ ರೂಪಾಂತರ ತಳಿ ಜೆಎನ್.1 ವಿಚಾರವಾಗಿ ಮಾತನಾಡಿದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ 'ಕೇರಳದ ಗಡಿಯಲ್ಲಿ ಎಚ್ಚರಿಕೆ ಕ್ರಮ ವಹಿಸಲಾಗಿದೆ. ಜಿಲ್ಲಾಡಳಿತ, ಜಿಲ್ಲಾ ಆರೋಗ್ಯ ಇಲಾಖೆ ಕಟ್ಟೆಚ್ಚರ ವಹಿಸುತ್ತಿದ್ದು, ಕೆಮ್ಮು, ನೆಗಡಿ, ಜ್ವರ ಇರುವವರಿಗೆ ತಪಾಸಣೆ ಮಾಡಲಾಗುತ್ತಿದೆ. ಜೊತೆಗೆ ಕೇರಳದಿಂದ ಬರುವವರ ಮೇಲೆ ನಿಗಾ ವಹಿಸಲಾಗಿದೆ. ಅಗತ್ಯ ಇದ್ದವರಿಗೆ ಆರ್.ಟಿ.ಪಿ.ಸಿ.ಆರ್ ತಪಾಸಣೆ ಮಾಡುತ್ತೇವೆ ಎಂದರು.


**ಬೆಂಗಳೂರಿನ ಆಸ್ಪತ್ರೆಗಳಲ್ಲಿ ಸಿದ್ಧತೆ:** ಕೊರೊನಾ ಹಾಟ್‌ಸ್ಪಾಟ್ ಆಗುತ್ತಿರುವ ಬೆಂಗಳೂರಿನ ವಾಣಿ ವಿಲಾಸ, ವಿಕ್ಟೋರಿಯಾ, ಮಿಂಟೋ ಆಸ್ಪತ್ರೆಗಳಲ್ಲಿ ಈಗಾಗಲೇ ಕೊರೊನಾ ಮುನ್ನೇಚರಿಕೆ ಕ್ರಮವಾಗಿ ಸಿದ್ಧತೆ ಮಾಡಿಕೊಳ್ಳಲಾಗಿದೆ. ಪ್ರತಿನಿತ್ಯ ಆಸ್ಪತ್ರೆ ಕ್ಯಾಂಪಸ್‌ನಲ್ಲಿ ಸಿಬ್ಬಂದಿಗಳು ಖಖಿ–ಕಅಖ ಟೆಸ್ಟ್ ಮಾಡುತ್ತಿದ್ದಾರೆ. ಕೊವಿಡ್ ಸೋಂಕಿತರಿಗೆ ಬೆಂಗಳೂರಿನ ಆಸ್ಪತ್ರೆಯಲ್ಲಿ ಪುರುಷರು, ಮಹಿಳೆಯರು, ಮಕ್ಕಳಿಗೆ ಪ್ರತ್ಯೇಕ ವಾರ್ಡ್ ನಿರ್ಮಾಣ ಮಾಡಲಾಗಿದೆ. ಐಸಿಯುನಲ್ಲಿ 6 ಬೆಡ್ ಗಳನ್ನು ಇರಿಸಲಾಗಿದೆ. ಜೊತೆಗೆ ಚಿಕಿತ್ಸೆ ನೀಡಲು ನರ್ಸ್, ವೈದ್ಯರು, ಟೆಕ್ನಿಷಿಯನ್ಸ್‌ಗಳನ್ನು ಆಸ್ಪತ್ರೆ ಹೊಂದಿದೆ.

**ಕೋಟೆ ನಾಡಿನಲ್ಲಿ ರಾಹುಲ್ ಜಾರಕಿಹೊಳಿ ರೌಂಡ್ಸ್**

# ಶೈಕ್ಷಣಿಕ ಪ್ರಗತಿಯಿಂದ ಮಾತ್ರ ಸಮಾಜ ಬಲಿಷ್ಠವಾಗಲು ಸಾಧ್ಯ: ರಾಹುಲ್







» **ಚಿತ್ರದುರ್ಗ**

ನಮ್ಮ ಸಮಾಜ ಬಲಿಷ್ಠವಾಗಿ ಬೆಳೆಯಲು ಶೈಕ್ಷಣಿಕ ಪ್ರಗತಿಯಿಂದ ಮಾತ್ರ ಸಾಧ್ಯ, ಮುಂದಿನ ದಿನಗಳಲ್ಲಿ ಸಮಾಜದ ಪರವಾಗಿ ಹೋರಟದಲ್ಲಿ ಭಾಗವಹಿಸಿ ಸಮಾಜ ಕಟ್ಟುವ ಕೆಲಸ ಮಾಡುತ್ತೇನೆ ಎಂದು ಯುವ ರಾಜಕಾರಣಿ ಸಚಿವ ಸತೀಶ್ ಜಾರಕಿಹೊಳಿ ಪುತ್ರ ರಾಹುಲ್ ಜಾರಕಿಹೊಳಿ ಹೇಳಿದರು.

ನಗರದ ತರಾಸು ರಂಗ ಮಂದಿರದಲ್ಲಿ ನಡೆದ ವಾಲ್ಮೀಕಿ ನಾಯಕ ನೌಕರರ ಪ್ರತಿಭಾ ಪುರಸ್ಕಾರ, ಸಮಾವೇಶ ಹಾಗೂ ಸಾಧಕರಿಗೆ ಸನ್ಮಾನ ಸಮಾರಂಭದಲ್ಲಿ ಭಾಗವಹಿಸಿ ರಾಜ್ಯದಲ್ಲಿ ಸಮಾಜ ಬಲಿಷ್ಠವಾಗಿ ಬೆಳೆಯುತ್ತಿದೆ. ಸಮಾಜ ಸಂಘಟನೆಗೆ ಎಲ್ಲಾರೂ ಶ್ರಮಿಸುತ್ತಿದ್ದಾರೆ. ಅನೇಕ ವರ್ಷಗಳಿಂದ ತಳಿತಕ್ಕೊಳಗಾದ ನಮ್ಮ ಸಮಾಜ ಇಂದು ದಿನದಿಂದ ದಿನಕ್ಕೆ ಪ್ರಗತಿ ಕಾಣುತ್ತಿದೆ.

ಸರ್ಕಾರಿ ನೌಕರರ ಸಂಘದಿಂದ ಏರ್ಪಡಿಸಿರುವ ಈ ಕಾರ್ಯಕ್ರಮ ಅರ್ಥಪೂರ್ಣವಾಗಿದೆ. ಒಂದು ಸರ್ಕಾರ ಉತ್ತಮ ಆಡಳಿತ ನಡೆಯಲು ಸರ್ಕಾರಿ ನೌಕರರು ಪಾತ್ರ ದೊಡ್ಡದು.ಸಮಾಜ ಪರ ಕಾಳಜಿಯಿಂದ ಕಳೆದ 12 ವರ್ಷಗಳಿಂದ ಸರ್ಕಾರಿ ನೌಕರರ ಸಂಘದಿಂದ ಪ್ರತಿಭಾ ಪುರಸ್ಕಾರ ಮೂಲಕ ವಿದ್ಯಾರ್ಥಿಗಳನ್ನು ಪ್ರೋತ್ಸಾಹ ನೀಡುವ ಕೆಲಸ ಮಾಡುತ್ತಿರುವುದು ನನಗೆ ಸಂತಸ ತಂದಿದೆ ಎಂದರು.

ಸಮಾಜದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದವರನ್ನು ಗುರುತಿಸಿ ಸಾಧಕರನ್ನು ಸನ್ಮಾನಿಸಿ ಯುವ ಸಮೂಹಕ್ಕೆ ಸ್ಫೂರ್ತಿ ತುಂಬುತ್ತಿರುವುದು ಭವಿಷ್ಯದ ದೃಷ್ಟಿಯಿಂದ ಉತ್ತಮ ಬೆಳವಣಿಗೆಯಾಗಿದೆ.

ಪ್ರಸ್ತುತ ದಿನಗಳಲ್ಲಿ ನಮ್ಮ ಸಮಾಜಕ್ಕೆ ಮೀಸಲಾತಿಯಿಂದ ಅಧಿಕಾರ ದೊರತಿದೆ. ಅನೇಕ ನಾಯಕರು ಸಮಾಜದ ಪರವಾಗಿ ಕೆಲಸ ಮಾಡಲು ಸಹಕಾರಿಯಾಗಿದ್ದು ಸಮಾಜದ ಪರವಾಗಿ ನಿಂತು ಸಮಾಜವನ್ನು ಉನ್ನತ ಮಟ್ಟಕ್ಕೆ ಕೊಂಡೊಯ್ಯಲು ಮತ್ತಷ್ಟು ಶ್ರಮ ಹಾಕಬೇಕು. ಎಲ್ಲಾ ಸಮಾಜಗಳು ಸಾಮಾಜಿಕವಾಗಿ ಬಲಿಷ್ಠವಾಗಲು ಬೆಳೆಯಲು ಶಿಕ್ಷಣದಿಂದ ಮಾತ್ರ ಸಾಧ್ಯವಾಗುತ್ತದೆ. ವಿದ್ಯಾರ್ಥಿಗಳು ಉತ್ತಮ ಶಿಕ್ಷಣವನ್ನು ನೀಡುವ ಕೆಲಸ ಮಾಡಬೇಕು.

ನಾವು ಮೊದಲು ಕುಟುಂಬ ಗೆಲ್ಲಬೇಕು.ಕುಟುಂಬ ಗೆದ್ದರೆ ಸಮಾಜ ಗೆಲ್ಲುಲು ಸಾಧ್ಯ, ಪೋಷಕರು ಮಕ್ಕಳಿಗೆ ಗುಣಮಟ್ಟದ ಶಿಕ್ಷಣದ ಜೊತೆಗೆ ಉನ್ನತ ವ್ಯಾಸಂಗ ಮಾಡಲು ಕೊಡಿಸಬೇಕು. ವಾಲ್ಮೀಕಿ ಸಮಾಜದಗುರುಗಳಹೋರಟದಿಂದ ಮೀಸಲಾತಿ ಹೆಚ್ಚಿಸಿದೆ. ಸ್ವಾಮೀಜಿ ಅವರ ಹೋರಟವನ್ನು ನಾವು ಎಂದು ಮರೆಯಲು ಸಾಧ್ಯವಿಲ್ಲ, ಸ್ವಾಮೀಜಿ ಅವರಂತೆ ಎಲ್ಲಾರೂ ಸಮಾಜ ಪರ ಕೆಲಸದಲ್ಲಿ ತೊಡಕಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಪುಟ ↘ 2

# ರಾಷ್ಟ್ರಮಟ್ಟದಲ್ಲಿ ಬೆಣ್ಣೆದೋಸೆಗೆ ಬ್ರ್ಯಾಂಡಿಂಗ್ ಗುರಿ ಜಿಲ್ಲಾಧಿಕಾರಿ ಡಾ.ವೆಂಕಟೇಶ್.ಎಂ.ವಿ

» ದಾವಣಗೆರೆ

ದಾವಣಗೆರೆ ಬೆಣ್ಣೆ ದೋಸೆಯನ್ನು ರಾಷ್ಟ್ರಮಟ್ಟದಲ್ಲಿ ಜನಪ್ರಿಯಗೊಳಿಸಲು ಹಾಗೂ ದೋಸೆಯ ಸಾಂಪ್ರದಾಯಿಕತೆ ಉಳಿಸುವ ಮೂಲಕ ಗುಣಮಟ್ಟ ಕಾಪಾಡಿಕೊಂಡು ಬ್ರಾಂಡಿಂಗ್ ಕಲ್ಪಿಸುವುದು ಈ ದೋಸೋತ್ಸವದ ಮುಖ್ಯ ಉದ್ದೇಶವಾಗಿದೆ ಎಂದು ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ ತಿಳಿಸಿದರು.

ಶನಿವಾರ ಜಿಲ್ಲಾಡಳಿತದ ವತಿಯಿಂದ ನಗರದ ಎಂ.ಬಿ.ಎ ಮೈದಾನ ಮತ್ತು ಗ್ಲಾಸ್ ಹೌಸ್ ಮುಂಭಾಗದಲ್ಲಿ ಆಯೋಜಿಸಲಾದ ದೋಸೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ದಾವಣಗೆರೆಬೆಣ್ಣೆದೋಸೆ ಇತಿಹಾಸ ಪ್ರಸಿದ್ಧವಾಗಿದ್ದು, ರಾಷ್ಟ್ರೀಯ ಮಟ್ಟದಲ್ಲಿ ದೋಸೆಯನ್ನು ಜನಪ್ರಿಯ ಗೊಳಿಸುವನಿಟ್ಟಿನಲ್ಲಿಇಂದಿನಿಂದಡಿಸೆಂಬರ್ 25ರವರೆಗೆ ದೋಸೋತ್ಸವ ಏರ್ಪಡಿಸ ಲಾಗಿದೆ. ಕಳೆದ 4 ದಶಕಗಳಿಂದ ಬೆಣ್ಣೆ ದೋಸೆ ಮಾರಾಟ ಮಾಡುತ್ತಿರುವ ಅಂಗಡಿ ಮಾಲೀಕರಮುಖಾಂತರಸಾರ್ವಜನಿಕರಿಗೆ ಗುಣಮಟ್ಟದ ಬೆಣ್ಣೆ ದೋಸೆಯನ್ನು ತಲುಪಿಸುವಲ್ಲಿ ಜಿಲ್ಲಾಡಳಿತ ಸಫಲವಾಗಿದೆ ಎಂದರು. ನಗರದಲ್ಲಿ ಅಖಿಲ ಭಾರತ ವೀರಶೈವ ಮಹಾಸಭಾ ಕಾರ್ಯಕ್ರಮ ನಡೆಯುತ್ತಿದ್ದು ಬಂದಂತಹ ಜನರಿಗೆ ಬೆಣ್ಣೆ ದೋಸೆಯನ್ನು ಪರಿಚಯಿಸುವ ನಿಟ್ಟಿನಲ್ಲಿ ಈ ಸಂಧರ್ಭದಲ್ಲಿ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಬಂದು ದಾವಣಗೆರೆಯ ಗರಿಗರಿ ಬೆಣ್ಣೆ ದೋಸೆಯನ್ನು ಸವಿದು ಆನಂದಿಸಬ ಹುದಾಗಿದೆ ಎಂದರು. ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಜಯ್ ಕುಮಾರ್ ಎಂ. ಸಂತೋಷ್, ದಾವಣಗೆರೆ ತಾಲ್ಲೂಕು ತಹಶೀಲ್ದಾರ್ ಡಾ. ಅಶ್ವತ್ ಎಂ.ಬಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಷಣ್ಮುಖಪ್ಪ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಉಪನಿರ್ದೇಶಕ ಶಿದ್ರಾಮ್ ಮಾರಿಹಾಳ್, ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ರಾಘವೇಂದ್ರ ಪ್ರಸಾದ್ ಉಪಸ್ಥಿತರಿದ್ದರು.







## ಫಾಸ್ಟ್ ನ್ಯೂಸ್

### ಲೋಕಾಯುಕ್ತ ಅಧಿಕಾರಿಗಳಿಂದ ಅಹವಾಲು ಸ್ವೀಕಾರ

» ಚಿತ್ರದುರ್ಗ

ಇದೇ ಡಿಸೆಂಬರ್ 27 ಮತ್ತು 28ರಂದು ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಖುದ್ದಾಗಿ ಲೋಕಾಯುಕ್ತ ಅಧಿಕಾರಿಗಳು ಭೇಟಿ ನೀಡಿ ಸಾರ್ವಜನಿಕರಿಂದ ದೂರು ಹಾಗೂ ಅವಹಾಲುಗಳನ್ನು ಸ್ವೀಕರಿಸಲಿದ್ದಾರೆ.ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿಕರ ಕೆಲಸ ಮಾಡಿಕೊಡಲು ಲಂಚಕ್ಕಾಗಿ ಬೇಡಿಕೆ, ಯೋಜನೆಗಳ ಅನುಷ್ಠಾನದಲ್ಲಿ ಅನಗತ್ಯ ವಿಳಂಬ, ಕರ್ತವ್ಯದಲ್ಲಿ ನಿರ್ಲಕ್ಷತನ, ತಾರತಮ್ಯ, ಭ್ರಷ್ಟಾಚಾರ ಹಾಗೂ ದುರಾಡಳಿದ ಕುರಿತು ಸಾರ್ವಜನಿಕರು ನಿಗದಿತ ಅರ್ಜಿ ನಮೂನೆಯಲ್ಲಿ ದೂರು ಸಲ್ಲಿಸಬಹುದು.ಡಿಸೆಂಬರ್ 27ರಂದು ಬೆಳಿಗ್ಗೆ 10 ರಿಂದ 1 ರವರೆಗೆ ಹೊಸದುರ್ಗ ಪುರಸಭೆ ಹಾಗೂ ಮೊಳಕಾಲ್ಮುರು ಪಟ್ಟಣ ಪಂಚಾಯಿತಿಯಲ್ಲಿ ಅಹವಾಲು ಸ್ವೀಕರಿಸುವರು. ಮಧ್ಯಾಹ್ನ 3 ರಿಂದ ಸಂಜೆ 5.30 ರವರೆಗೆ ಹೊಳಲ್ಕೆರೆ ಪುರಸಭೆ ಹಾಗೂ ಚಳ್ಳಕೆರೆ ನಗರಸಭೆ ಕಚೇರಿಯಲ್ಲಿ ಅಹವಾಲು ಸ್ವೀಕರಿಸುವರು. ಡಿಸೆಂಬರ್ 28ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1 ರವರೆಗೆ ಹಿರಿಯೂರು ಪುರಸಭೆ ಹಾಗೂ ಮಧ್ಯಾಹ್ನ 3 ರಿಂದ ಸಂಜೆ 5.30 ರವರೆಗೆ ಚಿತ್ರದುರ್ಗ ನಗರಸಭೆ ಕಚೇರಿಯಲ್ಲಿ ಲೋಕಾಯುಕ್ತ ಅಧಿಕಾರಿಗಳು ಹಾಜರಿದ್ದು, ದೂರು, ಅಹವಾಲು ಸ್ವೀಕರಿಸುವರು ಎಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬಂಗಾರದ ನಾಣ್ಯಕ್ಕಾಗಿ ಮುಗಿ ಬಿದ್ದ ಜನ!

» ಚಿತ್ರದುರ್ಗ

ಕೆಳಗಳಹಟ್ಟಿ ಬಳಿ ಬಂಗಾರದ ನಾಣ್ಯ ಸಿಗುತ್ತದೆ ಎಂಬ ವದಂತಿ ಹಿನ್ನಲೆ. ಬಂಗಾರದ ನಾಣ್ಯಕ್ಕಾಗಿ ಮುಗಿ ಬಿದ್ದು ಜನ ಹುಡಕಾಟ ನಡೆಸಿದ ಘಟನೆ ನಡೆದಿದೆ. ಜನ ಮರಳೋ, ಜಾತ್ರೆ ಮರಳೋ ಎಂಬಂತೆ ನಾಣ್ಯಕ್ಕಾಗಿ ಹುಡುಕಾಟವನ್ನು ಚಿತ್ರದುರ್ಗ ಜಿಲ್ಲೆ ಮೊಳಕಾಲ್ಮೂರು ತಾಲ್ಲೂಕಿನ ಕೆಳಗಳಹಟ್ಟಿಯಲ್ಲಿ ನಡೆದಿದೆ. ಯಾರೋ ಬಂಗಾರದ ನಾಣ್ಯ ಎಸೆದು ಹೋಗಿದ್ದಾರೆ ಎಂದು ವದಂತಿಯ ಹಿನ್ನಲೆಯಲ್ಲಿ ಬೆಳಿಗ್ಗೆಯಿಂದ ಬಂಗಾರದ ನಾಣ್ಯಕ್ಕೆ ಜನ ಹುಡುಕಾಡುತ್ತಿದ್ದಾರೆ. ಹೆದ್ದಾರಿ ಪಕ್ಕದಲ್ಲೇ ನೂರಾರು ಜನರಿಂದ ಸರ್ಚಿಂಗ್ ಕಾರ್ಯ ನಡೆದಿದೆ ಮೊಳಕಾಲ್ಮೂರು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.

### ನೀಲಕಂಠೇಶ್ವರಸ್ವಾಮಿಯ ಕಡೇ ಕಾರ್ತಿಕ ಇಂದು

» ಚಿತ್ರದುರ್ಗ

ನಗರದ ಶ್ರೀ ನೀಲಕಂಠೇಶ್ವರಸ್ವಾಮಿಯ ಕಡೇ ಕಾರ್ತಿಕ ಮಹೋತ್ಸವವೂ ದಿನಾಂಕ 25-12-2023ನೇ ಸೋಮವಾರ ನಡೆಯಲಿದೆ ಎಂದು ವೀರಶೈವ ಸಮಾಜದ ಕಾರ್ಯದರ್ಶಿ ಎನ್.ಬಿ. ವಿಶ್ವನಾಥ್ ತಿಳಿಸಿದ್ದಾರೆ. ನಗರದ ಶ್ರೀ ನೀಲಕಂಠೇಶ್ವರಸ್ವಾಮಿ ದೇವಸ್ಥಾನದಲ್ಲಿ ಕಾರ್ತಿಕೋತ್ಸವ ಕಾರ್ಯಕ್ರಮವು ವಿಜೃಂಭಣೆಯಿಂದ ಜರುಗಲಿದೆ. ಅಂದು ಸಾಯಂಕಾಲ 7-00 ಗಂಟೆಗೆ ದೀಪಾರಾಧನೆಯ ನಂತರ ಶ್ರೀ ನೀಲಕಂಠೇಶ್ವರಸ್ವಾಮಿಯ ಪಲ್ಲಕ್ಕಿ ಉತ್ಸವ ಮೆರವಣಿಗೆ ಜರುಗುತ್ತದೆ. ಮೆರವಣಿಗೆಯು ದೇವಸ್ಥಾನಕ್ಕೆ ಬಂದ ನಂತರ ಅಷ್ಟೋತ್ತರ ಬಿಲ್ವಾರ್ಚನೆ ಹಾಗೂ ಮಹಾ ಮಂಗಳಾರತಿ ನಂತರ ಪ್ರಸಾದ ವ್ಯವಸ್ಥೆ ಇರುತ್ತದೆ ಎಂದು ವೀರಶೈವ ಸಮಾಜದ ಆಡಳಿತ ಮಂಡಳಿಯವರು ತಿಳಿಸಿರುತ್ತಾರೆ.

### ಶ್ರೀ ಬಸವೇಶ್ವರ ಪುತ್ಥಳಿ ನಿರ್ಮಾಣ ಮಾಡುವ ಬಗ್ಗೆ ಪೂರ್ವ ಬಾವಿ ಸಭೆ ಇಂದು

» ಚಿತ್ರದುರ್ಗ

ತ್ರಿವಿಧ ದಾಸೋಹದಿಂದ ಹಲವು ಸಮಾಜಮುಖಿ ಕೆಲಸ ಮಾಡುತ್ತಿರುವ ವೀರಶೈವ ಲಿಂಗಾಯತ ಜನಾಂಗ ನಮ್ಮ ಸಮಾಜದ ಮಹಾನ್ ಪುರುಷರಲ್ಲಿ ವಿಶ್ವಗುರು ಶ್ರೀ ಬಸವೇಶ್ವರರು ಸಹ ಒಬ್ಬರು. ಜಿಲ್ಲೆಯಲ್ಲಿ ನಮ್ಮ ಸಮಾಜದ ಮಠಗಳು ಹತ್ತು ಹಲವು ಕಾರ್ಯಗಳನ್ನು ಮಾಡುತ್ತಿವೆ , ಆದರೆ ನಮ್ಮ ಚಿತ್ರದುರ್ಗ ನಗರದಲ್ಲಿ ಶ್ರೀ ಬಸವೇಶ್ವರರ ಪ್ರತಿಮೆ ಇಲ್ಲದೆ ಇರುವುದು ದುರಂತ. ನಗರದ ಜಿಲ್ಲಾಧಿಕಾರಿಗಳ ವೃತ್ತದಲ್ಲಿ ಶ್ರೀ ಬಸವೇಶ್ವರ ಪುತ್ಥಳಿ ನಿರ್ಮಾಣ ಮಾಡಲು ಸಮಾಜ ಬಂಧುಗಳು ಸಲಹೆ ನೀಡಿದ್ದಾರೆ ಹಾಗಾಗಿ ಸೋಮವಾರ ಬೆಳಗ್ಗೆ 11 ಗಂಟೆಗೆ ನಗರದ ಶ್ರೀ ನೀಲಕಂಠೇಶ್ವರ ದೇವಸ್ಥಾನದಲ್ಲಿ ಸಭೆ ಯೋಜಿಸಲಾಗಿದೆ. ವೀರಶೈವ ಲಿಂಗಾಯತ ಸಮಾಜದ ಪ್ರಕಟಣೆ ತಿಳಿಸಿದೆ.

### ಐಕ್ಯತಾ ಸಮಾವೇಶದ ಬಗ್ಗೆ ಪೂರ್ವಭಾವಿ ಸಭೆ

» ಚಿತ್ರದುರ್ಗ

ನಗರದ ಹೂರ ವಲಯದ ಬಸವ ಮೂರ್ತಿ ಮಾದಾರ ಚೆನ್ನಯ್ಯ ಮಠದ ಪಕ್ಕದಲ್ಲಿನ ಮೈದಾನದಲ್ಲಿ 2024 ರ ಜನವರಿ ತಿಂಗಳಿನಲ್ಲಿ ಕರ್ನಾಟಕ ರಾಜ್ಯ ಶೋಷಿತ ಸಮುದಾಯಗಳ ಮಹಾ ಒಕ್ಕೂಟ ಹಾಗೂ ಕರ್ನಾಟಕ ರಾಜ್ಯ ಹಿಂದುಳಿದ ಜಾತಿಗಳ ಒಕ್ಕೂಟ ಬೆಂಗಳೂರು ಇವರಿಂದ ಆಯೋಜಿಸಲು ಉದ್ದೇಶಿಸಿರುವ ಶೋಷಿತ ಸಮುದಾಯಗಳ ಐಕ್ಯತಾ ಸಮಾವೇಶದ ಬಗ್ಗೆ ಪೂರ್ವಭಾವಿ ಸಭೆಯನ್ನು ಕರೆಯಲಾಗಿದೆ



ಚಿತ್ರದುರ್ಗ: ನಗರದ ಹಳೆ ಮಾಧ್ಯಮಿಕ ಶಾಲಾ ಮೈದಾನದಲ್ಲಿ ನಡೆಯುತ್ತಿರುವ ಅರ್ಜುನ ಕಪ್ ಆಯೋಜಕರು ಮತ್ತು ಮಾಜಿ ಅಧ್ಯಕ್ಷರಾದ ಬಿ. ಕಾಂತರಾಜ್ ಅವರು ಅರ್ಜುನ ಆನೆಯ ಮಾವುತ ವಿನು ಅವರನ್ನು ಸನ್ಮಾನಿಸಿ ಗೌರವಿಸಿದರು. ಈ ಸಂದರ್ಭದಲ್ಲಿ ಇತಿಹಾಸ ಸಂಶೋಧಕರಾದ ಧರ್ಮೇಂದ್ರ ಕುಮಾರ್, ಮಾಜಿ ನಗರಸಭೆ ಸದಸ್ಯಎಸ್.ಬಿ.ಎಲ್.ಮಲ್ಲಿಕಾರ್ಜುನ್ ಇದ್ದರು.

## ಶೈಕ್ಷಣಿಕ ಪ್ರಗತಿಯಿಂದ ಮಾತ್ರ ಸಮಾಜ ಬಲಿಷ್ಠವಾಗಲು ಸಾಧ್ಯ

» ಮೊದಲ ಪುಟದಿಂದ

ರಾಜ್ಯರಾಜಕಾರಣದಲ್ಲಿ ಪವರ್ ಫುಲ್ ಹೆಸರು ಹೊಂದಿರುವ ಫ್ಯಾಮಿಲಿ ಎಂದರೆ ಮೊದಲು ನೆನಪಿಗೆ ಬರುವುದು ಜಾರಕಿಹೊಳಿ ಫ್ಯಾಮಿಲಿ ಅಂತನೇ ಜನರು ಹೇಳುತ್ತಾರೆ. ಜಾರಕಿಹೊಳಿ ಫ್ಯಾಮಿಲಿಯ ಮಾಸ್ಟರ್ ಮೈಂಡ್ ರಾಜ್ಯ ರಾಜಕಾರಣ ಸೈಲೆಂಟ್ ಸತೀಶ್ ಜಾರಕಿಹೊಳಿ ಎಂಬ ಖ್ಯಾತಿ ಪಡೆದಿದ್ದಾರೆ. ನಾಯಕ ಸಮಾಜದ ಪ್ರಶ್ನಾತೀತ ನಾಯಕರಾಗಿ ಸಮಾಜ ಸಂಘಟನೆಗೆ ವಿಶೇಷ ಕೊಡುಗೆ ನೀಡಿರುವ ಸತೀಶ್ ಜಾರಕಿಹೊಳಿ ಪುತ್ರ ರಾಹುಲ್ ಜಾರಕಿಹೊಳಿ ಭಾನುವಾರ ಕೋಟೆ ನಾಡಿನಲ್ಲಿ ರೌಂಟ್ಸ್ ಮಾಡಿದರು. ತಂದೆಯಂತೆ ಸರಳತೆಯನ್ನು ಮೈಗೂಡಿಸಿಕೊಂಡಿರುವ ರಾಹುಲ್ ಜಾರಕಿಹೊಳಿ ಅವರು ವಾಲ್ಮೀಕಿ ನಾಯಕ ಸಮಾಜದ ನೌಕರರ ಸಂಘದ ಕಾರ್ಯಕ್ರಮದಲ್ಲಿ ಭಾಗವಹಿಸುವ ಮೂಲಕ ತಮ್ಮ ತಂದೆ ತಂದೆಯಂತೆ ನಾನು ಸಹ ರಾಜ್ಯದಲ್ಲಿ ನಮ್ಮ ಸಮಾಜವನ್ನು ಸಂಘಟನೆ ಮಾಡುತ್ತೇನೆ ಎಂಬ ಸಂದೇಶವನ್ನು ನಾಯಕ ಸಮಾಜಕ್ಕೆ ರಾವನಿಸಿದರು. ಹೌದು ರಾಹುಲ್ ಜಾರಕಿಹೊಳಿ ಅವರು ನಡೆ ನುಡಿ ಜನರ ನಾಡಿಮಿಡಿತವನ್ನು ಅರಿತು ಸಮಾಜದಲ್ಲಿ ಹೆಜ್ಜೆ ಹಾಕುತ್ತಿದ್ದಾರೆ. ತಂದೆಯಂತೆ ಮಾನವ ಬಂಧುತ್ವ ವೇದಿಕೆ ತತ್ವವನ್ನು ತನ್ನಲ್ಲಿ ಅಳವಡಿಸಿಕೊಂಡಿದ್ದಾರೆ. ಬುದ್ಧ, ಬಸವ, ಅಂಬೇಡ್ಕರ್ ತತ್ವ ಸಿದ್ಧಾಂತಕ್ಕೆ ಹೊಂದಿಕೊಳ್ಳುವುದರಲ್ಲಿ ಎರಡು ಮಾತಿಲ್ಲ. ನಾಯಕ ಸಮಾಜದ ಯುವ ನಾಯಕರು ಎಲ್ಲೂ ಸಹ ಅಷ್ಟಾಗಿ ಕಾಣುತ್ತಿಲ್ಲ. ಎಲ್ಲಾ ಪ್ರಭಾವ ಮತ್ತು ತಂದೆ ಆಶೀರ್ವಾದದ ಜೊತೆಗೆ ನಾಯಕ ಸಮಾಜದ ಪ್ರೀತಿ ಪಡೆದುಕೊಳ್ಳುವ ಮೂಲಕ ಸಮಾಜಕ್ಕೆ ಉತ್ತಮ ನಾಯಕನಾಗಿ ಹೊರ ಹೊಮ್ಮುವ ಎಲ್ಲಾ ಲಕ್ಷಣಗಳನ್ನು ನಾವು ರಾಹುಲ್ ಜಾರಕಿಹೊಳ್ಳಿ ಅವರ ನೋಡಬಹುದಾಗಿದ್ದು ಮುಂದಿನ ದಿನಗಳಲ್ಲಿ ರಾಹುಲ್ ಸಮಾಜದ ಆಸ್ತಿಯಾಗಿ ಸಮಾಜ ಸಂಘಟನೆಯಲ್ಲಿ ತೊಡಗಲಿ ಎಂಬ ಜನಾಭಿಪ್ರಾಯ ಎಲ್ಲೆಡೆಯಿಂದ ಕೇಳಿ ಬರುತ್ತಿದೆ.

## ಕೇಂದ್ರದ ಉದ್ಯೋಗ ಖಾತ್ರಿ ಯೋಜನೆಯ ಸದುಪಯೋಗ ಪಡೆದುಕೊಳ್ಳಿ: ಪಿಡಿಓ

» ಹೊಸದುರ್ಗ

ಬರುವ 20 24 25 ನೇ ಸಾಲಿನ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕ್ರಿಯಾಯೋಜನೆ ತಯಾರಿಸಲಾಗುತ್ತಿದ್ದು ಅರ್ಹ ಫಲಾನುಭವಿಗಳು ಇದರ ಉಪಯೋಗ ಪಡೆದುಕೊಳ್ಳಬೇಕೆಂದು ಪಿ ಡಿ ಓ ವಿಜಯಕುಮಾರ್ ತಿಳಿಸಿದರು

ತಾಲೂಕಿನ ಹೆಬ್ಬಳ್ಳಿ ಗ್ರಾಪಂ ವ್ಯಾಪ್ತಿಯ ಹೆಬ್ಬಳ್ಳಿ ನಾಗರಕಟ್ಟೆ ತುಂಬಿನಕೆರೆ ಕೊಂಡಾಪುರ ಕಡಿವಾಣಕಟ್ಟೆ ಕೃಷ್ಣಾಪುರ ಗ್ರಾಮಗಳಿಗೆ ಭೇಟಿ ಮಾಡಿ ತುಂಬಿನಕೆರೆ ಗ್ರಾಮ ಸಭೆ ಉದ್ದೇಶಿಸಿ ಮಾತನಾಡಿದ ಅವರು ಕಲ್ಯಾಣಿಗಳ ಪುನಶ್ಚೇತನ, ದನ,ಕುರಿ ಶೆಡ್ ನಿರ್ಮಾಣ, ಪ್ರಾಚೀನ ರಾಜ ಕಾಲುವೆಗಳ ಹೂಳೆತ್ತುವುದು, ಶಾಲಾ ಅಭಿವೃದ್ಧಿ , ಕೃಷಿ ಮತ್ತು ತೋಟಗಾರಿಕೆ , ಹಾಗೂ ಸಾಮಾಜಿಕ ಅರಣ್ಯ ಕಾಮಗಾರಿಗಳು ಕೇಂದ್ರ ಸರ್ಕಾರದ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಬಂದಿದ್ದು ಅರ್ಹ ಫಲಾನುಭವಿಗಳು ಕ್ರಿಯಾ ಯೋಜನೆ ಮಾಡಲು ಸಹಕರಿಸಿ ಇದರ ಸದುಪಯೋಗ ಪಡೆದುಕೊಳ್ಳಬೇಕು, ಹಂತ ಹಂತವಾಗಿ ಫಲಾನುಭವಿಗಳಿಗೆ ಕಾಮಗಾರಿ ಮಾಡಲು ಅವಕಾಶ ಮಾಡಲಾಗುವುದು, ಈ ಬಾರಿ ಬರಗಾಲ ಹೆಚ್ಚು ಇರುವುದರಿಂದ ಕನಿಷ್ಠ ನೂರು ದಿನ ಉದ್ಯೋಗ ಅವಕಾಶವನ್ನು ಪಡೆದುಕೊಳ್ಳಬೇಕು ಎಂದರು.ಇದೇ ಸಂದರ್ಭದಲ್ಲಿ ವಿವಿದ ಕಾಮಗಾರಿಗಳ ಪಟ್ಟಿಯನ್ನು ಸೇರಿಸಬೇಕೆಂದು ಗ್ರಾಮಸ್ಥರು ಪಿಡಿಓ ರವರಲ್ಲಿ ಮನವಿ ಮಾಡಿದರು.ಸಭೆಯಲ್ಲಿ ಹೆಬ್ಬಳ್ಳಿ ಗ್ರಾಪಂ ಅಧ್ಯಕ್ಷೆ ರತ್ನಮ್ಮ, ಗ್ರಾಪ್ರಂ ಸದಸ್ಯ ರಾಜಾಹುಲಿ, ನಿರಂಜನ್, ಗ್ರಾಪಂ ಮಾಜಿ ಅಧ್ಯಕ್ಷ ಜಗದೀಶ್,ಮುಖಂಡರಾದ ಪ್ರಸನ್ನ,ರಾಜಪ್ಪ, ಮಲ್ಲಿಕಾರ್ಜುನ್, ಬಸವರಾಜ್ ತುಂಬಿನಕೆರೆ, ಪೈಲ್ವಾನ್ ಜಯಪ್ಪ ಹಾಗೂ ರಾಮು,ಇದ್ದರು




**ಪ್ರಮುಖ ಸುದ್ದಿ**

# ಚಿತ್ರದುರ್ಗ ಜಿಲ್ಲೆ ಅಭಿವೃದ್ದಿಗೆ 371ಜೆ ಸ್ಥಾನಮಾನ ಅಗತ್ಯ

» ಮೊದಲ ಪುಟದಿಂದ

ಶಾಸಕ ಟಿ.ರಘುಮೂರ್ತಿ ಮಾತನಾಡಿ 371ಜೆ ಸ್ಥಾನಕ್ಕಾಗಿ ನಿರಂತರ ಪಕ್ಷಾತೀತ ಹೋರಾಟದಿಂದ ಮಾತ್ರ ಸ್ಥಾನಮಾನ ದೊರೆಯಲು ಸಾಧ್ಯವಾಗುತ್ತದೆ.

ಶಾಸಕ ಟಿ.ರಘುಮೂರ್ತಿ ಮಾತನಾಡಿ ನಮ್ಮ ಸಮಾಜದಲ್ಲಿ ಹುಟ್ಟಿ ಎನ್. ವೈ.ಹನುಮಂತಪ್ಪ ಅವರ ಮಾಡಿದ ಸೇವೆಯನ್ನು ನಾವು ಎಂದು ಮರೆಯಲು ಸಾಧ್ಯವಿಲ್ಲ,

ಸಮಾಜದ ಪರವಾಗಿ ಸ್ವಾಮೀಜಿ ಅವರು ನಿರಂತರ 260 ದಿನಗಳ ಮೀಸಲಾತಿ ಹೋಟದಿಂದ. 3.5% ರಿಂದ 7 % ಗೆ ಮೀಸಲಾತಿ ದೊರೆಯಲು ಸಾಧ್ಯವಾಯಿತು. ಚಿತ್ರದುರ್ಗ ಜಿಲ್ಲೆ ಇತಿಹಾಸ ಪ್ರಸಿದ್ಧ ಜಿಲ್ಲೆಯಾಗಿದ್ದು ಮದಕರಿನಾಯಕ ಆಳಿದ ಜಿಲ್ಲೆಯಾಗಿದೆ. ಚಿತ್ರದುರ್ಗ ಜಿಲ್ಲೆ ಅಭಿವೃದ್ಧಿ ಕುಂಠಿತವಾಗಿದೆ. ಕಲ್ಯಾಣ ಕರ್ನಾಟಕಕ್ಕೆ ವಿಶೇಷ ಸ್ಥಾನಮಾನದಂತೆ ಚಿತ್ರದುರ್ಗ ಜಿಲ್ಲೆಯ ಮೂರು ತಾಲೂಕುಗಳಾದ ಚಿತ್ರದುರ್ಗ , ಚಳ್ಳಕೆರೆ,ಮೊಳಕಾಲ್ಮುರು, ದಾವಣಗೆರೆ ಜಿಲ್ಲೆಯ ಜಗಳೂರನ್ನು 371 ಜೆ ಗೆ ವಿಶೇಷ ಸ್ಥಾನಮಾನಕ್ಕೆ ಸೇರಿಸುವ ಕೆಲಸ ಆಗಬೇಕಿದೆ. ಅದು ನಿರಂತರವಾಗಿ ಹೋರಟದಿಂದ ಮಾತ್ರ ಸಾಧ್ಯ, ಇಂತಹ ಮಹತ್ವದ ಹೋರಟಗಳಿಗೆ ರೂಪುರೇಷೆ ರೂಪಸಿ ಮಂಡಿಸಬೇಕು ಎಂದರು.






ವಿದ್ಯಾರ್ಥಿಗಳು ಪ್ರತಿಭೆ ಗುರುತಿಸಿ ಪುರಸ್ಕಾರವನ್ನು ಮಾಡುವ ಮೂಲಕ ಮಕ್ಕಳನ್ನು ಪ್ರೋತ್ಸಹಿಸುವ ಕೆಲಸ ಆಗುತ್ತಿದೆ. ತಂದೆ ತಾಯಿಗಳು ಸಹ ನಮ್ಮ ಮಕ್ಕಳು ನಮಗಿಂತ ಹೆಚ್ಚು ಆರ್ಥಿಕವಾಗಿ ಸಬಲರನ್ನು ಮಾಡಲು ಶ್ರಮಿಸಬೇಕು. ತಾವುಗಳು ಅರ್ಥ ದಾರಿ ಸವೆಸಿದ್ದು ಗುರಿ ಮುಟ್ಟುವ ತನಕ ನಿರಂತರ ಶ್ರಮ ಇರಲಿ ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು. ವಿದ್ಯಾರ್ಥಿ ದೇಸೆಯಲ್ಲಿ ಉನ್ನತ ಹುದ್ದೆಗಳ ಕಡೆ ಗಮನ ಹರಿಸಬೇಕು.

ಆದರೆ ಉನ್ನರ ಹುದ್ದೆ ದೊರೆತ ತಕ್ಷಣ ತಂದೆ ತಾಯಿಯನ್ನು ವೃದ್ದಾಶ್ರಮ ಸೇರಿಸುವ ಪ್ರಕರಣ ಹೆಚ್ಚುತ್ತಿದ್ದು ಪೋಷಕರನ್ನು ನೋಡಿಕೊಳ್ಳುವ ಕೆಲಸ ಮಕ್ಕಳು ಮಾಡಬೇಕು. ನಮ್ಮ ಸರ್ಕಾರ ನಮ್ಮ ಸಮಾಜಕ್ಕೆ ಮೂರು ಜನರಿಗೆ ಸಚಿವ ಸ್ಥಾನಮಾನ ನೀಡಿದೆ. ಎನ್. ವೈ.ಗೋಪಾಲಕೃಷ್ಣ ಅವರಿಗೆ ಸಹ ಉನ್ನರ ಸ್ಥಾನಮಾನ ನೀಡಲಿ ಎಂದು ಬಯಸುತ್ತೇನೆ. ವಿವಿಧ ಪರೀಕ್ಷೆಗಳಲ್ಲಿ ಅತ್ಯುತ್ತಮ ಅಂಕಗಳೊಂದಿಗೆ ಉತ್ತೀರ್ಣರಾ ಜಿಲ್ಲೆಯನ್ನು ಯದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಹಾಗೂ ಪಿಎಚ್‌ಡಿ ಪದವಿ ಪುರಸ್ಕೃತರನ್ನು ಗೌರವಿಸಲಾಯಿತು. ಸಮಾಜದ ಸಾಧಕರಾದ ನಿವೃತ್ತ ಡಿಐಜಿ ಎಂ.ಎನ್.ನಾಗರಾಜ್, ಪತ್ರಕರ್ತ ಎಂ.ಎನ್.ಅಹೋಬಲಪತಿ, ಉದ್ಯಮಿಗಳಾದ ಪಿ.ವಿ.ಅರುಣ್‌ಕುಮಾರ್, ಸನ್ನಿ ಆರ್.ರಾಜಮನೆ, ಥ್ರೋಬಾಲ್ ಆಟಗಾರ ಆರ್.ಹೊಯ್ಸಳ,ಶಿಕ್ಷಕಿ ಕೆ.ಒ.ರತ್ನಮ್ಮ, ಡಾ.ಎನ್.ಬಿ.ಪ್ರಹ್ಲಾದ್,ಡಾ. ಎಚ್.ಟಿ.ತೇಜಸ್ವಿ, ಡಾ.ಎಸ್.ಕೆ.ಮೋಹನ್, ಮುಖ್ಯಲೆಕ್ಕಾಧಿ ಕಾರಿ ಸಿ.ಜೆ.ಶ್ರೀನಿವಾಸ್, ನಾಟಕ ಅಕಾಡೆಮಿ ಸದಸ್ಯ ತಿಪ್ಪೇಸ್ವಾಮಿ ಅವರನ್ನು ಸನ್ಮಾನಿಸಲಾಯಿತು.

ಅಧ್ಯಕ್ಷತೆ ವಹಿಸಿದ್ದ ಸಂಘದ ಅಧ್ಯಕ್ಷ ಡಾ.ಎಚ್.ಗುಡ್ಡದೇಶ್ವರಪ್ಪ ಪ್ರಾಸ್ತಾವಿಕವಾಗಿ ಮಾತನಾಡಿದರು. ಜಿಲ್ಲಾ ನಾಯಕ ಸಮಾಜದ ಅಧ್ಯಕ್ಷ ಎಚ್.ಜೆ.ಕೃಷ್ಣಮೂರ್ತಿ, ತಾಲೂಕು ಅಧ್ಯಕ್ಷ ಬಿ.ಕಾಂತರಾಜ್, ಎಸ್.ಸಂದೀಪ್, ನಾಗೇಂದ್ರ ಬಾಬು, ಮುಖ್ಯ ಲೆಕ್ಕಧಿಕಾರಿ ಶ್ರೀನಿವಾಸ್, ಅಧಿಕಾರಿಗಳಾದ ಡಾ.ಎಚ್.ಪಾಲಾಕ್ಷ, ಕೆ.ಪಿ.ಮಧುಸೂದನ್, ಪಾಪಯ್ಯ, ಮಾರಣ್ಣ, ಮಹಾಂತೇಶ್, ದೀಪಕ್, ಜೆ.ವೈಶಾಲಿ, ಎಸ್. ಎಸ್.ಗಣೇಶ್, ಡಾ.ಎಸ್.ರಂಗಸ್ವಾಮಿ, ಡಾ.ಸಾಲಿಮಂಜಪ್ಪ, ತಿಪ್ಪೇಸ್ವಾಮಿ, ಎ.ರವೇಶ್,ಪ್ರೊ.ಟಿ.ಎಲ್.ಸುಧಾಕರ್,ಮಂಜುನಾಥ್,ಬಸವರಾಜ ಟಿ.ಗೊರವರ್,ಅಂಜಿನಪ್ಪ, ಕೆ.ಪಿ. ಸಂಪತ್‌ಕುಮಾರ್,ಜಿ. ಬಿ. ಮಹಂತೇಶ್,ಎಸ್.ಮಂಜುನಾಥ್, ಎನ್.ಪಿ.ರವಿ, ಎಚ್.ಮಹೇಶ್, ಪೋಲಿಸ್ ರವಿ ಮತ್ತಿತರ ಅಧಿಕಾರಿ, ನೌಕರರು,ಸಮುದಾಯದ ಹಾಗೂ ಸಂಘದ ಪ್ರಮುಖರು ಇದ್ದರು.

## ಫಾಸ್ಟ್ ನ್ಯೂಸ್

### ಗಿಗ್ ಕಾರ್ಮಿಕರ ವಿಮಾ ಯೋಜನೆ : ಸೇವಾ ಸಿಂಧು ಪೋರ್ಟಲ್‌ನಲ್ಲಿ ನೊಂದಣಿ

» **ಚಿತ್ರದುರ್ಗ**

ದೇಶದಲ್ಲೇ ಮೊದಲ ಬಾರಿಗೆ ಫುಡ್ ಡೆಲಿವರಿ ಮಾಡುವ ಹಾಗೂ ಇ-ಕಾಮರ್ಸ್ ಸಂಸ್ಥೆಗಳಾದ ಅಮೆಝಾನ್, ಫ್ಲಿಫ್‌ಕಾರ್ಟ್, ಪೋರ್ಟರ್, ಫಾರ್ಮಸಿ, ಬ್ಲಿಂಕಿಟ್, ಜೆಪ್ಟೊ ಬಿಗ್ ಬಾಸ್ಕೆಟ್, ಡೊಮಿನೊಸ್ ಮುಂತಾದ ಸಂಸ್ಥೆಗಳಲ್ಲಿ ಡೆಲಿವರಿ ವೃತ್ತಿಯಲ್ಲಿ ತೊಡಗಿರುವ ಗಿಗ್ ಕಾರ್ಮಿಕರಿಗೆ ರಾಜ್ಯ ಸರ್ಕಾರ ವಿಮಾ ಯೋಜನೆ ಜಾರಿ ಮಾಡಿದೆ. ಪೂರ್ಣಕಾಲಿಕ ಹಾಗೂ ಅರೆಕಾಲಿಕ ಡೆಲಿವರಿ ನೌಕರರು ಯೋಜನೆಯ ಲಾಭ ಪಡೆಯಬಹುದಾಗಿದೆ. ಎಲ್ಲಾ ಅರ್ಹ ಕಾರ್ಮಿಕರು ಸೇವಾ ಸಿಂಧು ಪೋರ್ಟಲ್‌ನಲ್ಲಿ ನೊಂದಾಯಿಸಿಕೊಳ್ಳಬಹುದು. ವಿಮಾ ಸೌಲಭ್ಯವು ಕರ್ತವ್ಯದಲ್ಲಿ ಇರುವಾಗ ಹಾಗೂ ಇಲ್ಲದಿರುವಾಗ ಸಂಭವಿಸುವ ಅಪಘಾತಗಳಿಗೂ ಅನ್ವಯ ಆಗಲಿದೆ. ಅಪಘಾತದಿಂದ ಮರಣ ಹೊಂದಿದಲ್ಲಿ ವಿಮಾ ಪರಿಹಾರ ರೂ.2 ಲಕ್ಷ ಹಾಗೂ ಜೀವಾ ಮಿಮಾ ರೂ.2 ಲಕ್ಷ ಸೇರಿ ಒಟ್ಟು 4 ಲಕ್ಷ ಪರಿಹಾರ ದೊರಕಲಿದೆ. ಅಪಘಾತದಿಂದ ಸಂಪೂರ್ಣವಾಗಿ ಶಾಶ್ವತ ದುರ್ಬಲತೆಗೆ ಹೊಂದಿದರೆ ರೂ.2 ಲಕ್ಷ, ಅಪಘಾತದ ಸಂದರ್ಭದ ಆಸ್ಪತ್ರೆ ವೆಚ್ಚ ಮರುಪಾವತಿ ರೂ.1 ಲಕ್ಷ ಹಾಗೂ ಜೀವ ವಿಮಾ ರೂ.2 ಲಕ್ಷ ಪರಿಹಾರ ದೊರಕಲಿದೆ. ಕರ್ನಾಟಕದಲ್ಲಿ ಡೆಲವರಿ ಕಾರ್ಯನಿರ್ವಹಿಸುತ್ತಿರವವರಿಗೆ ಮಾತ್ರ ಈ ಯೋಜನೆ ಅನ್ವಯಿಸುತ್ತದೆ. 18 ರಿಂದ 60 ವರ್ಷದೊಳಿಗಿನ ಕಾರ್ಮಿಕರು ಆಧಾರ್ ಸಂಖ್ಯೆ, ವೃತ್ತಿ ನಿರ್ವಹಿಸುತ್ತಿರುವ ಸಂಸ್ಥೆಗಳು ವಿತರಿಸಿದ ಗುರುತಿನ ಚೀಟಿ, ವೇತನ ಚೀಟಿ, ವೇತನ ಪಡೆದ ಬ್ಯಾಂಕ್ ಪಾಸ್‌ಬುಕ್ ಹಾಗೂ ಇ-ಶ್ರಮ್ ಕಾರ್ಡ್ ಈ ಎಲ್ಲ ದಾಖಲೆಗಳೊಂದಿಗೆ ನೊಂದಣಿ ಮಾಡಿಕೊಳ್ಳಬಹುದು. ಆದಾಯ ತೆರಿಗೆ ಪಾವತಿಸುವವರು ಹಾಗೂ ಇ.ಎಸ್.ಐ ಫಲಾನುಭವಿಗಳಿಗೆ ಯೋಜನೆ ಅನ್ವಯಿಸುವುದಿಲ್ಲ. ಆಸಕ್ತರು ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಕಾರ್ಮಿಕ ಅಧಿಕಾರಿ, ಕಾರ್ಮಿಕ ನಿರೀಕ್ಷಕರ ಕಛೇರಿಗೆ ಭೇಟಿ ನೀಡಬಹುದು. ಕಚೇರಿ ದೂರವಾಣಿ ಸಂಖ್ಯೆ 08194-231394 ಹಾಗೂ ಕಾರ್ಮಿಕ ಸಹಾಯವಾಣಿ 155214 ಕರೆ ಮಾಡಬಹುದು.

### ಪತ್ರಿಕಾ ವಿತರಕರಿಗೆ ಅಪಘಾತ ಪರಿಹಾರ, ವೈದ್ಯಕೀಯ ಸೌಲಭ್ಯ

» **ಚಿತ್ರದುರ್ಗ**

ದಿನಪತ್ರಿಕೆಗಳನ್ನು ವಿತರಿಸುವ ಪತ್ರಿಕಾ ವಿತರಕರಿಗೆ ರಾಜ್ಯ ಸರ್ಕಾರ ಅಪಘಾತ ಪರಿಹಾರ ಹಾಗೂ ವೈದ್ಯಕೀಯ ಸೌಲಭ್ಯ ಯೋಜನೆ ಜಾರಿ ಮಾಡಿದೆ. ಕರ್ನಾಟಕದಲ್ಲಿ ನಿವಾಸಿಯಾಗಿರುವ 16 ರಿಂದ 59 ವರ್ಷದೊಳಿಗಿನ ಪತ್ರಿಕಾ ವಿತರಕರು ಇ-ಶ್ರಮ ಪೋರ್ಟ್‌ಲ್ www.eshram.gov.in ಮೂಲಕ ನೋಂದಣಿ ಮಾಡಿಕೊಳ್ಳಬಹುದು. ಆದಾಯ ತೆರಿಗೆ ಪಾವತಿಸುವವರು ಹಾಗೂ ಇ.ಎಸ್.ಐ ಫಲಾನುಭವಿಗಳಿಗೆ ಯೋಜನೆ ಅನ್ವಯಿಸುವುದಿಲ್ಲ. ಅಪಘಾತದಿಂದ ಮರಣ ಹೊಂದಿದಲ್ಲಿ ವಿಮಾ ಪರಿಹಾರ ರೂ.2 ಲಕ್ಷ. ಅಪಘಾತದಿಂದ ಸಂಪೂರ್ಣವಾಗಿ ಶಾಶ್ವತ ದುರ್ಬಲತೆ ಹೊಂದಿದ್ದಲ್ಲಿ ಗರಿಷ್ಠ ರೂ.2 ಲಕ್ಷ, ಅಪಘಾತ ಹಾಗೂ ಗಂಭೀರ ಅನಾರೋಗ್ಯಕ್ಕೆ ಆಸ್ಪತ್ರೆ ವೆಚ್ಚ ಮರುಪಾವತಿ ರೂ.1 ಲಕ್ಷದ ವರೆಗೆ ಪರಿಹಾರ ದೊರಕಲಿದೆ. ಆಸಕ್ತರು ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಕಾರ್ಮಿಕ ಅಧಿಕಾರಿ, ಕಾರ್ಮಿಕ ನಿರೀಕ್ಷಕರ ಕಛೇರಿಗೆ ಭೇಟಿ ನೀಡಬಹುದು. ಕಚೇರಿ ದೂರವಾಣಿ ಸಂಖ್ಯೆ 08194-231394 ಹಾಗೂ ಕಾರ್ಮಿಕ ಸಹಾಯವಾಣಿ 155214 ಕರೆ ಮಾಡಬಹುದು.

### ಗಣಿತ ದಿನಾಚರಣೆ



» **ಚಳ್ಳಕೆರೆ**

ಗಣಿತ ಕ್ಷೇತ್ರದಲ್ಲಿ ಶ್ರೀನಿವಾಸ್‌ರಾಮಾನುಜನ್‌ರವರ ಅವಿಸ್ಮರಣೀಯ ಸೇವೆ ಯಾರಿಂದಲೂ ಎಂದಿಗೂ ಅಳಿಸಲಾಗದು. ಅವರ ಜನ್ಮದಿನವನ್ನು ನಾವೆಲ್ಲರೂ ಗಣಿತದಿನಾಚರಣೆ ಮೂಲಕ ಆಚರಣೆ ಮಾಡುತ್ತಿದ್ದೇವೆಂದು ಚಿಕ್ಕಚೆಲ್ಲೂರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕ ಎಚ್. ಆಂಜನೇಯ ತಿಳಿಸಿದರು.

ಅವರು, ಶನಿವಾರ ಶಾಲೆಯಲ್ಲಿ ಆಯೋಜಿಸಿದ್ದ ಗಣಿತ ದಿನಾಚರಣೆ ಕಾರ್ಯಕ್ರಮ ಹಾಗೂ ವಿದ್ಯಾರ್ಥಿಗಳು ತಯಾರಿಸಿದ ಅನೇಕ ಗಣಿತ ಮಾದರಿಗಳ ಪ್ರದರ್ಶನವನ್ನು ಉದ್ಘಾಟಿಸಿ ಮಾತನಾಡಿದರು. ಯಾವುದೇ ವಿದ್ಯಾರ್ಥಿ ತನ್ನ ಭವಿಷ್ಯವನ್ನು ರೂಪಿಸಿಕೊಳ್ಳಬೇಕಾದಲ್ಲಿ ಗಣಿತ ವಿಷಯ ಹೆಚ್ಚು ಮಹತ್ವವನ್ನು ಪಡೆದುಕೊಳ್ಳುತ್ತದೆ. ಅಂಕಿ, ಸಂಖ್ಯೆ ಇಲ್ಲದೆ ಯಾವುದೇ ವಿದ್ಯೆಯನ್ನು ಕಲಿಯಲು ಸಾಧ್ಯವಾಗದು ಎಂದರು.

ಹಿರಿಯ ಶಿಕ್ಷಕ ಎಚ್.ತಿಪ್ಪೇರುದ್ರಪ್ಪ, ಶ್ಯಾಮಲಾ, ಜೆ ಅನಿಲ, ಟಿ.ಲೋಹಿತ ಮುಂತಾದವರು ಉಪಸ್ಥಿತರಿದ್ದರು.

# ತಾಲ್ಲೂಕಿನ ದೊಡ್ಡ ಉಳ್ಳಾರ್ತಿಯಲ್ಲಿ ಕರಡಿ ದಾಳಿ ಮಹಿಳೆಗೆ ಗಾಯ: ಆಸ್ಪತ್ರೆ ದಾಖಲು

» **ಚಳ್ಳಕೆರೆ**

ತಾಲ್ಲೂಕಿನ ದೊಡ್ಡ ಉಳ್ಳಾರ್ತಿ ಗ್ರಾಮದಲ್ಲಿ ತೋಟಕ್ಕೆ ಹೋಗುತ್ತಿದ್ದ ರೈತ ಮಹಿಳೆ ಮೇಲೆ ಮೂರು ಕರಡಿಗಳು ದಾಳಿ ನಡೆಸಿ ಗಾಯಗೊಳಿಸಿದ ಘಟನೆ ಭಾನುವಾರ ಮುಂಜಾನೆ 6ರ ಸಮಯದಲ್ಲಿ ಗ್ರಾಮದ ಹೊರವಲಯದಲ್ಲಿ ನಡೆದಿದೆ.

ಮಂಜಮ್ಮ(65) ಕರಡಿ ದಾಳಿಯಿಂದ ಗಾಯಗೊಂಡು ಚಿತ್ರದುರ್ಗ ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಮಹಿಳೆ. ದೊಡ್ಡ ಉಳ್ಳಾರ್ತಿ ಗ್ರಾಮದ ಕರೆಯಿಂದ ಕರೀಕೆರೆಗೆ ಸಂಪರ್ಕ ನೀಡುವ ರಸ್ತೆ ಮೂಲಕ ಅವರ ತೋಟಕ್ಕೆ ಭಾನುವಾರ ಮುಂಜಾನೆ ಮಂಜಮ್ಮ ಹೋಗುವ ಸಂದರ್ಭಗಳಲ್ಲಿ ಒಂದು ದೊಡ್ಡ ಮತ್ತು ಎರಡು ಮರಿ ಕರಡಿ ದಾಳಿ ನಡೆಸಿವೆ ಮಂಜಮ್ಮಳಾ ತಲೆ ಹಾಗೂ ಎಡಗೈಗೆ ಪರಚಿ ಗಾಯಗೊಳಿಸಿದೆ ತೀವ್ರ ಗಾಯಗೊಂಡ ಮಹಿಳೆಯನ್ನು ಆಸ್ಪತ್ರೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗಿದೆ. ತಮ್ಮ ತೋಟದಿಂದ ಹಾಲು ತರಲು ಪ್ರತಿನಿತ್ಯವೂ





ಗ್ರಾಮದಿಂದಆದೇರಸ್ತೆಮೂಲಕ ತೆರಳುತ್ತಿದ್ದರು. ಭಾನುವಾರವೂ ಎಂದಿನಂತೆ ತೆರಳಿದಾಗ ಕರಡಿ ದಾಳಿ ನಡೆಸಿದೆ. ತೋಟದಲ್ಲಿ ಮಲಗಿದ್ದ ಮಂಜಮ್ಮಳಾ ಪತಿ, ಸುತ್ತಮುತ್ತಲ ಜನ ಹಾಗೂ ನಾಯಿಗಳು ಬೊಗಳುವುದನ್ನು ಕೇಳಿದ ಕರಡಿ ಅಲ್ಲಿಂದ ಓಡಿಹೋಗಿದೆ.



ಸುದ್ದಿ ತಿಳಿದ ಕೂಡಲೇ ತಹಶಿಲ್ದಾರರ್ ರೇಹಾನ್ ಪಾಷ, ತಳಕು ಪಿಎ□□ಐ ಲೋಕೇಶ್, ಪ್ರಾದೇಶಿಕ ಅರಣ್ಯ ಅಧಿಕಾರಿ ಬಹುಗುಣ ಸಿಬ್ಬಂದಿಯೊಂದಿಗೆ ಸ್ಥಳಕ್ಕೆ ಆಗಮಿಸಿದ್ದಾರೆ. ಗ್ರಾಮ ಮತ್ತು ಸುತ್ತಮುತ್ತಲಿನಲ್ಲಿ ಅರಣ್ಯ ರಕ್ಷಕರನ್ನು ಗಸ್ತಿಗಾಗಿ ನೇಮಿಸಿದೆ. ಸದರಿ ಕರಡಿ ಎರಡು ಮರಿ ಹಾಕಿದ್ದು ಮರಿಗೆ ಅಪಾಯ ಮಾಡಲು ಮಹಿಳೆ ಬಂದಿದ್ದಾಳೆಂದು ಭಾವಿಸಿ ಈ ದಾಳಿ ನಡೆಸಿರ ಬಹುದು ಎಂದು ಸಾರ್ವಜನಿಕರು ಆಧಿಕಾರಿಗಳ ಬಳಿ ಹೇಳಿದರು.

ಪ್ರಾದೇಶಿಕ ಅರಣ್ಯ ಅಧಿಕಾರಿ ಬಹುಗುಣ ಮಾಹಿತಿ ನೀಡಿ, ಗಾಯಗೊಂಡ ಮಹಿಳೆಗೆ ಇಲಾಖೆಯಿಂದಲೇ ಚಿಕಿತ್ಸೆ ಕೊಡಿಸಲಾಗುತ್ತಿದೆ. ಗ್ರಾಮಸ್ಥರು ಜಾಗೃತಿಯಿಂದ ಇರುವಂತೆ ಮನವಿ ಮಾಡಿದ್ದಾರೆ. ಪೊಲೀಸ್, ಅರಣ್ಯ ಇಲಾಖೆ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರೂ ಸಹ ಈ ಭಾಗದಲ್ಲಿ ಸಂಚಾರ ನಡೆಸಿ ಕರಡಿಯ ಚಲನವಲದ ನಿಗಾವಹಿಸಿದೆ ಅಗತ್ಯವಿದ್ದಲ್ಲಿ ಬೋನ್ ಇರಿಸುವುದಾಗಿ ತಿಳಿಸಿದ್ದಾರೆ.

# ದಲಿತರ ಅಭಿವೃದ್ಧಿಗೆ ನಿರಂತರ ಶ್ರಮ

» **ಚಳ್ಳಕೆರೆ**

ದಲಿತ ಸಮುದಾಯಗಳ ಮೇಲೆ ನಡೆಯುತ್ತಿರುವ ದೌರ್ಜನ್ಯ, ದಬ್ಬಾಳಿಕೆಯನ್ನು ತಡೆಯುವ ನಿಟ್ಟಿನಲ್ಲಿ ನೂತನ ಸಂಘಟನೆ ನಿರ್ಮಿಸಿ ದಲಿತ ಸಮುದಾಯವನ್ನು ಬಲಗೊಳಿಸುವ ಕೆಲಸ ಮಾಡಲಾಗುತ್ತಿದೆ ಎಂದು ದಲಿತ ಸಂಘಟನೆಗಳ ಮಹಾ ಒಕ್ಕೂಟ (ಬಹುಜನವಾದ) ನೂತನ ಅಧ್ಯಕ್ಷ ಉಮೇಶ್ ಚಂದ್ರ ಬ್ಯಾನರ್ಜಿ ತಿಳಿಸಿದರು.

ಅವರು, ನಗರದ ಪ್ರವಾಸಿ ಮಂದಿರದಲ್ಲಿ ಆಯೋಜಿಸಿದ್ದ ಸಂಘಟನೆಯ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆಯಲ್ಲಿ ಪಾಲ್ಗೊಂಡು ಮಾತನಾಡಿದರು. ಇತ್ತೀಚೆಗೆ ರಾಜ್ಯದಲ್ಲಿ ನಡೆಯುತ್ತಿರುವ ದಲಿತ ದೌರ್ಜನ್ಯಗಳನ್ನು ತಡೆದು ಅವರಿಗೆ ನ್ಯಾಯ ಕೊಡಿಸುವ ನಿಟ್ಟಿನಲ್ಲಿ ನಮ್ಮ ಸಂಘಟನೆ ಕಾರ್ಯನಿರ್ವಹಿಸಲಿದೆ.

ದಲಿತ ಸಮುದಾಯಕ್ಕೆ ಸರ್ಕಾರದಿಂದ ದೊರೆಯುವ ಪ್ರತಿ ಸೌಲಭ್ಯಗಳನ್ನು ದೊರೆಯುವಂತೆ ಮಾಡಿ, ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಅಭಿವೃದ್ಧಿ ಶ್ರಮಿಸಲಿದೆ.



ದಲಿತರ ಮೇಲೆ ನಡೆಯುವ ಹಲ್ಲೆ, ಇತರೆ ಪ್ರಕರಣ ತಿಳಿಯುತ್ತಲೇ ನಮ್ಮ ಸಂಘಟನೆಯ ಸದಸ್ಯರು ಸ್ಥಳಕ್ಕೆ ಖುದ್ದು ಭೇಟಿನೀಡಿ ಸಮಸ್ಯೆ ಬಗೆಹರಿಸುವಂತೆ ನಿರ್ದೇಶನ ನೀಡಲಾಗಿದೆ.ಜಿಲ್ಲಾ ಪ್ರಧಾನ ಸಂಚಾಲಕ ಕೆ.ಮಂಜುನಾಥ್ ಹೆಗ್ಗೆರೆ, ಮಹಾನಾಯಕ ದಲಿತ ಸೇನೆ ಜಿಲ್ಲಾ ಉಪಾಧ್ಯಕ್ಷ ಕೆ.ಪೆನ್ನೇಶ್, ಭಾರತೀಯ ಬೌದ್ಧ ಮಹಾಸಭಾ ಸಮಿತಿ ಎಸ್. ರವಿಕುಮಾರ್ ನನ್ನಿವಾಳ, ಹೊರಗುತ್ತಿಗೆ ಪೌರಕಾರ್ಮಿಕರ ತಾಲ್ಲೂಕು ಅಧ್ಯಕ್ಷ ಎಸ್ .ಶ್ರೀನಿವಾಸ್ ಕಲಾಮಂಡಳಿ ರಾಜ್ಯಾಧ್ಯಕ್ಷ ಕೆ.ಟಿ.ಮುತ್ತುರಾಜ್, ಜಿಲ್ಲಾ ಸಂಚಾಲಕ ಮಾರಪ್ಪ, ಚಂದ್ರು, ಮಂಜುನಾಥ್, ಗೋವಿಂದಪ್ಪ, ನಾಗರಾಜ್ ಸೇರಿದಂತೆ ಹಲವಾರು ಮುಖಂಡರು ದಲಿತ ಸಂಘಟನೆ ಮಹಾ ಒಕ್ಕೂಟ ( (ಬಹುಜನವಾದ )ದಲ್ಲಿ ಕಾರ್ಯನಿರ್ವಹಿಸುವರು ಎಂದರು.

ದಲಿತ ಸಂಘಟನೆಗಳ ಮಹಾ ಒಕ್ಕೂಟ (ಬಹುಜನವಾದ) ಅಧ್ಯಕ್ಷರಾಗಿ ಡಿ.ಉಮೇಶ್ ಚಂದ್ರ ಬ್ಯಾನರ್ಜಿ, ಪ್ರಧಾನ ಕಾರ್ಯದರ್ಶಿ ಮಂಜುನಾಥ, ಕಾರ್ಯದರ್ಶಿ ಶ್ರೀನಿವಾಸ್, ಉಪಾಧ್ಯಕ್ಷರಾಗಿ ಕೆ.ಪೆನ್ನೇಶ್,ಮಂಜುನಾಥ ಸೂರನ ಹಳ್ಳಿ, ಖಜಾಂಚಿ ಯಾಗಿ ಮುತ್ತುರಾಜ್ ಹಾಗೂ ರವಿ ಕುಮಾರ್ ಆಯ್ಕೆಯಾದರು.

# ಬೆಸ್ಕಾಂನಿಂದ ಸುರಕ್ಷತಾ ಜಾಗೃತಿ ಜಾಥ




» **ಚಳ್ಳಕೆರೆ**

ಚಳ್ಳಕೆರೆ ನಗರವೂ ಸೇರಿದಂತೆ ತಾಲ್ಲೂಕಿನಾದ್ಯಂತ ನಿರ್ಲಕ್ಷ್ಯತೆ ಕಾರಣ ವಿದ್ಯುತ್ ಶಾಕ್‌ನಿಂದ ವ್ಯಕ್ತಿ ಹಾಗೂ ಪ್ರಾಣಿಗಳು ಮೃತಪಟ್ಟಿದ್ದು, ಈ ಘಟನೆಗೆ ಕಾರಣ ವಿದ್ಯುತ್ ಇಲಾಖೆ ಇಲ್ಲ, ಬದಲಾಗಿ ಸಾರ್ವಜನಿಕರಲ್ಲಿ ಜಾಗೃತಿ ಇಲ್ಲದ ಕಾರಣ ಇಂತಹ ಅವಘಡ ನಡೆಯುತ್ತಿವೆ ಎಂದು ಬೆಸ್ಕಾಂ ಸಹಾಯಕ ಕಾರ್ಯಪಾಲಕ ಅಭಿಯಂತರ ರಾಜು ತಿಳಿಸಿದರು.

ನಗರದಲ್ಲಿ ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ಹಾಗೂ ಚಳ್ಳಕೆರೆ ಘಟಕದ ವತಿಯಿಂದ ಆಯೋಜಿಸಿದ್ದ ವಿದ್ಯುತ್ ಸುರಕ್ಷತೆ ಕುರಿತ ಜಾಗೃತಿ ಜಾಥಕ್ಕೆ ಚಾಲನೆ ನೀಡಿ, ತಾವು ಸಹ ಜಾಥದಲ್ಲಿ ಭಾಗವಹಿಸಿ ಮಾತನಾಡಿದರು. ತಾಲ್ಲೂಕು ಸೇರಿದಂತೆ ರಾಜ್ಯದ ವಿವಿಧೆಡೆಗಳಲ್ಲಿ ಆಗುತ್ತಿರುವ ವಿವಿಧ ವಿದ್ಯುತ್ ಅವಘಡಗಳನ್ನು ಆಲೋಕಿಸಿದ ಇಲಾಖೆ ಜಾಗೃತಿ ಮೂಡಿಸುವ ಮೂಲಕ ಸಾರ್ವಜನಿಕರ ಪ್ರಾಣ ರಕ್ಷಣೆಗೆ ಮುಂದಾಗಿದೆ.ಈ ಹಿನ್ನೆಲೆಯಲ್ಲಿ ಸಾರ್ವಜನಿಕರಿಗೆ ಮನವಿ ಮಾಡಿರುವ ಇಲಾಖೆ ವಿದ್ಯುತ್ ಕಂಬಗಳು ಇರುವ ಕಡೆ ಎಲ್ಲೂ ಪ್ರಾಣಿಗಳನ್ನು ಕಟ್ಟಬೇಡಿ, ಎಲ್ಲಾದರೂ ವಿದ್ಯುತ್ ತಂತಿ ಹರಿದಿದ್ದಲ್ಲಿ ಕೂಡಲೇ ಇಲಾಖೆಯ ಸಹಾಯಕ ವಾಣಿ 1912ಕ್ಕೆ ಕರೆ ಮಾಡಿ ತಿಳಿಸಬೇಕು,





ಚಳ್ಳಕೆರೆ ತಾಲ್ಲೂಕಿನ ನಾಯಕನಹಟ್ಟಿ ಶ್ರೀಗುರುತಿಪ್ಪೇರುದ್ರಸ್ವಾಮಿ ದೇವಸ್ಥಾನದಲ್ಲಿ ಲಕ್ಷದೀಪೋತ್ಸವ ಮಾಸದ ಹಿನ್ನೆಲೆಯಲ್ಲಿ ನಗರದ ನೃತ್ಯ ನಿಕೇತನ ನಾಟ್ಯ ಶಾಲೆಯ ಮಕ್ಕಳಿಗೆ ಭರತನಾಟ್ಯ ಪ್ರದರ್ಶನ ನಡೆಸಿದರು. ಪ್ರಾಚಾರ್ಯ ಸುಧಾಮೂರ್ತಿ, ಅರುಣಜಗದೀಶ್ ಮುಂತಾದವರು ಸಂಗೀತ ಕಾರ್ಯಕ್ರಮ ನಡೆಸಿಕೊಟ್ಟರು.

## ಪ್ರಮುಖ ಸುದ್ದಿ

# ಕುಟುಂಬದ ಮನವಿಗೆ ಒಂದೇ ಗಂಟೆಯಲ್ಲಿ ಸ್ಪಂದಿಸಿದ ಇಒ

» **ಚಳ್ಳಕೆರೆ**

ಗ್ರಾಮ ಪಂಚಾಯಿತಿಯ ಸದಸ್ಯೆಯ ಪತಿಯೊಬ್ಬರು ಅದೇ ಗ್ರಾಮ ಪಂಚಾಯಿತಿಯಲ್ಲಿ ಕಾರ್ಯನಿರ್ವಹಿಸುವ ನೌಕರನಿಗೆ ಮನೆ ಬಿಲ್ ಪಾವತಿಸಲು ನನಗೆ 30 ಸಾವಿರ ಲಂಚ ನೀಡಬೇಕೆಂದು ಒತ್ತಾಯಿಸಿದ್ದಲ್ಲದೆ, ಮನೆ ನಿರ್ಮಿಸಿಕೊಳ್ಳಲು ಅಡ್ಡಿಪಡಿಸಿರುವ ಪ್ರಸಂಗ ಚನ್ನಮ್ಮನಾಗತಿಹಳ್ಳಿ ಪಂಚಾಯಿತಿ ವ್ಯಾಪ್ತಿಯ ಹಾಲಿಗೊಂಡನಹಳ್ಳಿಯಲ್ಲಿ ನಡೆದಿದೆ.ಗ್ರಾಮದ ಕವಿತಮ್ಮ ಎಂಬ ಗೃಹಿಣಿ ಕುಟುಂಬ ಶುಕ್ರವಾರ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿಗಳಿಗೆ ದೂರು ನೀಡಿ 2017ರಲ್ಲಿ ನನ್ನ ಪತಿ ರಮೇಶ್ ಹೆಸರಿಗೆ ರಾಜೀವಗಾಂಧಿ ವಸತಿ ಯೋಜನೆಯ ಮನೆ ಮಂಜೂರಾಗಿದ್ದು, ಕೊರೋನಾ ಹಿನ್ನಲೆಯಲ್ಲಿ ಆಗ ಮನೆ ನಿರ್ಮಿಸಿಕೊಳ್ಳದೆ ಈಗ ಮನೆ ನಿರ್ಮಿಸಿಕೊಳ್ಳಲು ಮನೆಯ ಒಂದು ಬಿಲ್ ಮಂಜೂರಾದ ಕಾರಣ ಮನೆ ನಿರ್ಮಾಣ ಪ್ರಾರಂಭ ಮಾಡಿದ್ದೇನೆ. ಆದರೆ, ಅದೇ ಗ್ರಾಮ ಪಂಚಾಯಿತಿ ಸದಸ್ಯೆ ಅನಿಲಾಕ್ಷಿ



ಹಾಗೂ ಪಂಚಾಯಿತಿ ಅಧ್ಯಕ್ಷರು, ಇತರೆ ಸದಸ್ಯರು ಮನೆ ನಿರ್ಮಾಣ ಮಾಡಲು ಸಹಕಾರ ನೀಡಿ ನಮಗೆ ಎಲ್ಲಾ ರೀತಿಯ ಬೆಂಬಲ ವ್ಯಕ್ತಪಡಿಸಿದ್ದಾರೆ. ಆದರೆ, ಗ್ರಾಮ ಪಂಚಾಯಿತಿ ಸದಸ್ಯೆ ಅನಿಲಾಕ್ಷಿಯವರ ಪತಿ ಹನುಮಂತರಾಜು ನಮ್ಮ ಅವಧಿಯಲ್ಲಿ ಮನೆ ನಿರ್ಮಿಸಿಕೊಳ್ಳುತ್ತಿದ್ದೀರ, ನನಗೆ 30 ಸಾವಿರ ಲಂಚ ನೀಡಬೇಕು ಇಲ್ಲವಾದರೆ ಮುಂದಿನ ಎಲ್ಲಾ ಬಿಲ್‌ಗಳನ್ನು ರದ್ದು ಪಡಿಸುತ್ತೇನೆಂದು ಬೆದರಿಕೆ ಹಾಕಿ ಮೂರ್‍ನಾಲ್ಕು ಬಾರಿ ನೋಟಿಸ್ ಕೊಡಿಸಿ ಮನೆ ನಿರ್ಮಾಣಕ್ಕೆ ಅಡ್ಡಿ ಪಡಿಸುತ್ತಿದ್ದಾನೆಂದು ಲಿಖಿತ ಮನವಿ ನೀಡಿದ್ದಾರೆ.ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಎಸ್.ಶಶಿಧರ ಹಾಲಿಗೊಂಡನಹಳ್ಳಿಯ ಕವಿತಮ್ಮ ಮತ್ತು ರಮೇಶ್‌ಕುಟುಂಬ ನೀಡಿದ ಮನವಿಯನ್ನು ಸ್ವೀಕರಿಸಿ ಸರ್ಕಾರದ ಆದೇಶವಿದ್ದರೂ ಅಡ್ಡಿ ಪಡಿಸುವುದು ಸರಿಯಲ್ಲವೆಂದು ತಿಳಿಸಿ ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಮನೆ ನಿರ್ಮಾಣ ಮುಂದುವರೆಸಲು ತಿಳಿಸಿದ್ದಲ್ಲದೆ, ಮುಂದಿನ ಎಲ್ಲಾ ಬಿಲ್‌ಗಳನ್ನು ಪಾವತಿಸುವ ಭರವಸೆ ನೀಡಿದ್ದಾರೆ. ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ದೂರು ನೀಡಿದ ಒಂದೇ ಗಂಟೆಯಲ್ಲಿ ಸಮಸ್ಯೆಯನ್ನು ಬಗೆಹರಿಸಿದ ಕೀರ್ತಿ ಇಒ ಶಶಿಧರರವರದ್ದು. ಗ್ರಾಮಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಸುತ್ತಮುತ್ತಲ ನಿವಾಸಿಗಳು ಸಹ ರಮೇಶ್ ಕುಟುಂಬಕ್ಕೆ ಆಗುತ್ತಿರುವ ಕಿರುಕುಳದ ಬಗ್ಗೆ ಇಒ ಗಮನಕ್ಕೆ ತಂದಿದ್ದಾರೆ. ರಮೇಶ್ ಕುಟುಂಬಕ್ಕೆ ಧೈರ್ಯ ತುಂಬಿದ ಇಒ ಶಶಿಧರ, ಕಾಮಗಾರಿ ಮುಂದುವರೆಸುವಂತೆ ತಿಳಿಸಿದ್ದಾರೆ. ಗ್ರಾಮ ಪಂಚಾಯಿತಿ ಅಧ್ಯಕ್ಷ ಆನಂದಕುಮಾರ್, ಪಿಡಿಒ ವೇದವಾಸುಲು ನೊಂದಕುಟುಂಬದ ಸದಸ್ಯರಾದ ಕವಿತಾ, ರಮೇಶ, ರತ್ನಮ್ಮ, ಗುರುಮೂರ್ತಿ ಮುಂತಾದವರು ಇದ್ದರು.

## ಫಾಸ್ಟ್ ನ್ಯೂಸ್

### ಸಚಿವ ಬೈರತಿ ಸುರೇಶ್ ಪ್ರಯಾಣಿಸುತ್ತಿದ್ದ ಹೆಲಿಕಾಪ್ಟರ್ ಭೂಸ್ಪರ್ಶ

» **ಚಿತ್ರದುರ್ಗ**

ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ತೆರಳುತ್ತಿದ್ದ ಹೆಲಿಕಾಪ್ಟರ್ ತುರ್ತು ಭೂಸ್ಪರ್ಶ ಮಾಡಿದೆ. ಹಿರಿಯೂರು ತಾಲ್ಲೂಕಿನ ಹಾರನಕಟ್ಟೆ ಗ್ರಾಮದ ಬಳಿ ಭಾನುವಾರ ನಡೆದಿದೆ. ದಾರಿ ಮಧ್ಯೆ ತಾಂತ್ರಿಕ ಸಮಸ್ಯೆ ಕಾಣಿಸಿದ ಹಿನ್ನೆಲೆಯಲ್ಲಿ ಪೈಲೆಟ್ ಸುರಕ್ಷಿತವಾಗಿ ಹಾರನಕಟ್ಟೆ ಗ್ರಾಮದಲ್ಲಿ ಸೇಫ್ ಲ್ಯಾಂಡಿಂಗ್ ಮಾಡಿದ್ದಾರೆ. ಅಪಾಯದಿಂದ ಪಾರಾದ ಬೈರತಿ ಸುರೇಶ್ ಅವರು ರಸ್ತೆ ಮಾರ್ಗವಾಗಿ ಗದಗಕ್ಕೆ ತೆರಳಿದ್ದಾರೆ. ಈ ವಿಷಯ ತಿಳಿದ ಹಿರಿಯೂರು ಠಾಣೆ ಪೊಲೀಸರು ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಗದಗದ ಲಕ್ಷ್ಮೇಶ್ವರದ ರಾಮಗಿರಿಯಲ್ಲಿ ಆಯೋಜನೆಗೊಂಡಿದ್ದ ಕನಕ ಜಯಂತಿ ಕಾರ್ಯಕ್ರಮದಲ್ಲಿ ಭಾಗಿಯಾಗಲು ಬೆಳಗ್ಗೆ ಬೆಂಗಳೂರಿನ ಜಕ್ಕೂರು ಏರೋಡ್ರಂನಿಂದ ಸುರೇಶ್ ಅವರಿದ್ದ ಹೆಲಿಕಾಪ್ಟರ್ ಟೇಕಾಫ್ ಆಗಿತ್ತು ಎನ್ನಲಾಗಿದೆ.

### ಪ್ರಧಾನ ಸಂಚಾಲಕರಾಗಿ ಮುತ್ತುರಾಜ್ ಆಯ್ಕೆ



» **ಚಳ್ಳಕೆರೆ**

ಕರ್ನಾಟಕದಲಿತಸಂಘರ್ಷಸಮಿತಿ(ಪರಿವರ್ತನಾವಾದ) ಜಿಲ್ಲಾ ಮತ್ತು ತಾಲ್ಲೂಕು ಸಮಿತಿ ಸಭೆ ತುಮಕೂರಿನಲ್ಲಿ ನಡೆದಿದ್ದು, ಚಳ್ಳಕೆರೆ ತಾಲ್ಲೂಕಿನ ನೆಲಗೇತನಹಟ್ಟಿಯ ಗಾಯಕ ಕೆ.ಟಿ.ಮುತ್ತುರಾಜ್‌ರವರನ್ನು ಸಮಿತಿಯ ರಾಜ್ಯ ಕಲಾಮಂಡಳಿಯ ಪ್ರಧಾನ ಸಂಚಾಲಕರಾಗಿ ನೇಮಕ ಮಾಡಲಾಗಿದೆ. ರಾಜ್ಯ ಪ್ರಧಾನ ಸಂಚಾಲಕ ಗೋವಿಂದರಾಜು, ಕೆ.ಟಿ.ಮುತ್ತುರಾಜ್‌ರವರಿಗೆ ಪ್ರಧಾನ ಸಂಚಾಲಕರಾಗಿ ಆಯ್ಕೆಯಾದ ನೇಮಕಾತಿ ಪತ್ರವನ್ನು ನೀಡಿ ಶುಭಕೋರಿ ಸಂಘಟನೆಗೆ ಹೆಚ್ಚು ದುಡಿಯುವಂತೆ ಮನವಿ ಮಾಡಿದರು. ರಾಜ್ಯ ಮಹಿಳಾ ಒಕ್ಕೂಟದ ಅಧ್ಯಕ್ಷೆ ಚೂಡಾಮಣಿ, ತುಮಕೂರು ಜಿಲ್ಲಾಧ್ಯಕ್ಷೆ ಕಮಲಮ್ಮ, ಪ್ರಧಾನ ಸಂಚಾಲಕ ಅಂಕೇಶ್, ಯಲ್ಲಪ್ಪ ಹಾಗೂ ಇತರೆ ಪದಾಧಿಕಾರಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

### ಕಿಸಾನ್ ಸೇಲ್‌ನಿಂದ ರೈತ ದಿನಾಚರಣೆ



» **ಚಳ್ಳಕೆರೆ**

ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಪಕ್ಷ ರೈತರ ಸಮುದಾಯಕ್ಕೆ ಹಲವಾರು ಸೌಲಭ್ಯ ನೀಡುತ್ತಾ ಬಂದಿದೆ. ಇತ್ತೀಚೆಗೆ ಕೃಷಿ ಸಚಿವ ಚಲುವರಾಯಸ್ವಾಮಿ ಪ್ರತಿ ಹೆಕ್ಟೇರ್‌ಗೆ ಎರಡು ಸಾವಿರ ಬೆಳೆನಷ್ಟ ಪರಿಹಾರ ಕೊಡುವುದಾಗಿ ಘೋಷಿಸಿದ್ದಾರೆ. ಕಾಂಗ್ರೆಸ್ ಪಕ್ಷದ ರೈತರ ಪರವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಜಿಲ್ಲಾ ಕಾಂಗ್ರೆಸ್ ಕಿಸಾನ್ ಸೇಲ್ ಅಧ್ಯಕ್ಷ ಎ.ನಾಗರಾಜು ತಿಳಿಸಿದರು.ಅವರು, ನಗರದ ಬೆಂಗಳೂರು ರಸ್ತೆಯ ಬಿಸಿಎಂ ಹಾಸ್ಟಲ್‌ನ ಪದವೀಧರ ವಿದ್ಯಾರ್ಥಿಗಳಿಗೆ ಸಿಹಿ ಹಂಚುವ ಮೂಲಕ ರಾಷ್ಟ್ರೀಯ ರೈತ ದಿನಾಚರಣೆಯನ್ನು ಸರಳವಾಗಿ ಆಚರಿಸಿದರು. ವಿದ್ಯಾರ್ಥಿಗಳು ಸಹ ರೈತರ ಮಕ್ಕಳಾಗಿದ್ದು, ಹೆಚ್ಚಿನ ಸಮಯವನ್ನು ಶ್ರದ್ದೆಯಿಂದ ಓದಲು ಮೀಸಲಿಡುವಂತೆ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ರೈತ ಮುಖಂಡರಾದ ಪ್ರದೀಪ್‌ಕುಮಾರ್, ಪಾಲಯ್ಯ, ಯೂತ್‌ಕಾಂಗ್ರೆಸ್ ಅಧ್ಯಕ್ಷ ಸಿ.ಎಂ.ಶಿವಕುಮಾರಸ್ವಾಮಿ, ಸಂತೋಷ್, ವರುಣ್‌ಗೌಡ, ಕಿರಣ್, ಮುಂತಾದವರು ಉಪಸ್ಥಿತರಿದ್ದರು.


### ಅರ್ಜಿ ಆಹ್ವಾನ

» **ಚಿತ್ರದುರ್ಗ**

2023–24ನೇ ಸಾಲಿನಲ್ಲಿ ಪ್ರಥಮ ವರ್ಷದ ಪೂರ್ಣವಧಿ ಪಿಎಚ್‌ಡಿ ಅಧ್ಯಯನ ಪ್ರಾರಂಭಿಸಿರುವ (ದಿನಾಂಕ 2023ರ ಜನವರಿ 30 ಮತ್ತು ಅದರ ನಂತರ ಪ್ರಥಮ ವರ್ಷದ ಪಿಹೆಚ್‌ಡಿ ಪ್ರಾರಂಭಿಸಿರಬೇಕು) ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ–1, 2(ಎ) 3(ಎ) ಹಾಗೂ 3(ಬಿ)ಗೆ ಸೇರಿದ ಅರ್ಹ ಅಭ್ಯರ್ಥಿಗಳಿಂದ ಮಾಸಿಕ ವ್ಯಾಸಂಗ ವೇತನ, ಫೆಲೋಶಿಪ್‌ಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು 2024ರ ಜನವರಿ 10 ಕೊನೆಯ ದಿನ. 2023–24ನೇ ಸಾಲಿನಲ್ಲಿ ಕರ್ನಾಟಕದ ಶಾಸನಬದ್ದ ವಿಶ್ವ ವಿದ್ಯಾಲಯಗಳಲ್ಲಿ ಅಧೀನಕ್ಕೆ ಒಳಪಡುವ ಸಂಸ್ಥೆಗಳಲ್ಲಿ ಮಾತ್ರ ಆಫ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ವಿವರಗಳಿಗಾಗಿ *https://bcwd.karnataka.gov.in* ವೆಬ್‌ಸೈಟ್ ನಲ್ಲಿ ನೋಡಬಹುದು.

# ಡೆಸ್ಟಿನಿ ಕಲರ್‌ಫುಲ್ ಕಾರ್ಯಕ್ರಮಕ್ಕೆ ತೆರೆ







» **ಚಿತ್ರದುರ್ಗ**

ಚಳ್ಳಕೆರೆ ಟೋಲ್‌ಗೇಟ್‌ನಲ್ಲಿರುವ ಡಿ.ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯ ನಲವತ್ತು ವರ್ಷಗಳ ಶೈಕ್ಷಣಿಕ ಸಾರ್ಥಕತೆಗಾಗಿ ಡಿ.21 ರಿಂದ 24 ರವರೆಗೆ ನಾಲ್ಕು ದಿನಗಳ ಕಾಲ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಆಯೋಜಿಸಲಾಗಿದ್ದ ಡೆಸ್ಟಿನಿ–2023 ಕಲರ್‌ಫುಲ್ ಕಾರ್ಯಕ್ರಮ ಭಾನುವಾರ ತೆರೆಕಂಡಿತು.

ಹಾಸ್ಯ ಚಟಾಕಿಯಿಂದಲೆ ನಾಡಿನಾದ್ಯಂತ ಎಲ್ಲರ ಮನಗೆದ್ದಿರುವ ಸುಧಾ ಬರಗೂರು, ಪ್ರಹ್ಲಾದ್‌ಜೋಶಿ, ಮಿಮಿಕ್ರಿ ಗೋಪಿ, ರಾಘವೇಂದ್ರ ಆಚಾರ್ಯ ಇವರುಗಳು ಮೊದಲ ದಿನ ಹಾಸ್ಯದ ರಸದೌತಣ ನೀಡಿದರು.

ಎರಡನೆ ದಿನವಾದ ಶುಕ್ರವಾರ ಮ್ಯೂಸಿಕಲ್‌ಡೈರೆಕ್ಟರ್‌ಅರ್ಜುನ್‌ಜನ್ಯರವರ ಹಾಡಿಗೆ ನೆರೆದಿದ್ದ ಜನಸ್ತೋಮವೇ ನಿಬ್ಬೆರಗಾಗಿ ಕಾರ್ಯಕ್ರಮವನ್ನು ಸವಿಯಿತು.

ಮ್ಯೂಸಿಕಲ್ ಕನ್ಸರ್ಟ್ ಕನ್ನಡ ರ್‍ಯಾಪರ್ ಚಂದನ್‌ಶೆಟ್ಟಿ ಕಾರ್ಯಕ್ರಮ ಅಮೋಘವಾಗಿತ್ತು.

ಭಾನುವಾರದ ಡಿಜೆ. ನೈಟ್ ಕೂಡ ಮನಮೋಹಕವಾಗಿತ್ತು.

ಡೆಸ್ಟಿನಿಕಾರ್ಯಕ್ರಮಕ್ಕಾಗಿಶಿಕ್ಷಣಸಂಸ್ಥೆಯ ಆವರಣವನ್ನು ಕಂಗೊಳಿಸುವಂತೆ ವಿದ್ಯುತ್ ದೀಪಗಳಿಂದ ಅಲಂಕರಿಸಲಾಗಿತ್ತು. ನಾಲ್ಕು ದಿನದ ಕಾರ್ಯಕ್ರಮ ವೀಕ್ಷಣೆಗೆ ಬಂದವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಅಚ್ಚುಕಟ್ಟಾಗಿ ಆಸನಗಳ ವ್ಯವಸ್ಥೆ ಕಲ್ಪಿಸಲಾಗಿತ್ತು.

ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ, ಆಡಳಿತಾಧಿಕಾರಿ ಶ್ರೀಮತಿ ಎಸ್.ಚಂದ್ರಕಲಾ, ಮುಖ್ಯ ಕಾರ್ಯನಿರ್ವಹಣಾಧಿಕಾರಿ ಯುವ ಉತ್ಸಾಹಿ ಎಂ.ಸಿ.ರಘುಚಂದನ್ ಇವರುಗಳು ನಾಲ್ಕು ದಿನಗಳ ಕಾಲ ಕಾರ್ಯಕ್ರಮದ ಹೊಣೆಹೊತ್ತು ಎಲ್ಲಿಯೂ ಲೋಪವಾಗದಂತೆ ನಿಭಾಯಿಸಿದರು.

ಡೆಸ್ಟಿನಿ–2023 ಕಾರ್ಯಕ್ರಮದ ಯಶಸ್ಸಿನ ಹಿಂದೆ ಡಿ.ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯ ಇಡಿ ಸಿಬ್ಬಂದಿಯ ಸಹಕಾರವೂ ಅಡಗಿತ್ತು.

## ಶಾಲೆಯ ಸರ್ವೋತೊಮುಖ ಅಭಿವೃದ್ಧಿಗೆ ಕೈಜೋಡಿಸೋಣ: ಹನಮಂತರಾಯಪ್ಪ

» **ಪರಶುರಾಂಪುರ**

ಶಾಲೆಯ ಸರ್ವತೋಮುಖ ಪ್ರಗತಿಗೆ ನಾವು ನೀವೆಲ್ಲರೂ ಎಲ್ಲರ ಸಹಕಾರದೊಂದಿಗೆ ಕೈಜೋಡಿಸೋಣ ಎಂದು ನೂತನ ಮುಖ್ಯ ಶಿಕ್ಷಕ ಹನುಂತರಾಯಪ್ಪ ತಿಳಿಸಿದರು.

ಸಮೀಪದ ದೊಡ್ಡಚೆಲ್ಲೂರು ಗ್ರಾಮದ ಸರಕಾರಿ ಪ್ರೌಢಶಾಲೆಗೆ ಬಂದ ನೂತನ ಮುಖ್ಯ ಶಿಕ್ಷಕ ಹನಮಂತರಾಯಪ್ಪ ಅವರಿಗೆ ಆಯೋಜಿದ್ದ ಸ್ವಾಗತ ಕಾರ್ಯಕ್ರಮದಲ್ಲಿ ಮಾತನಾಡಿದರು.

ಅಧಿಕಾರ ಮುಖ್ಯವಲ್ಲ ,ಇಲ್ಲಿ ಮಾದರಿ ಶಾಲೆಯಾಗಿಸಲು ಎಲ್ಲರ ವಿಶ್ವಾಸ ಮುಖ್ಯ . ಸಮಾಜಕ್ಕೆ ಉತ್ತಮ ಕೊಡುಗೆ ನೀಡುವ ಮನೋಭಾವನೆ ಮೂಡುವ ವಿದ್ಯಾರ್ಥಿ ಪಡೆ ಕಟ್ಟೋಣ ಎಂದರು.

ಈ ವೇಳೆ ವಿವಿಧ ಶಾಲೆಗಳ ಶಿಕ್ಷಕರು ಹೂಮಾಲೆಯೊಂದಿಗೆ ಗೌರವಿಸಿದರು. ಶಿಕ್ಷಕರ ಸಂಘದ ಪದಾಧಿಕಾರಿಗಳು , ವಿವಿಧ ಶಾಲೆಗಳ ಮುಖ್ಯ ಶಿಕ್ಷಕರು , ಮುಖಂಡರು , ಹಿರಿಯರು ಜತೆ ಶಾಲೆ ಸಿಬ್ಬಂಧಿ ಇದ್ದರು.




## ಬರಗಾಲದಲ್ಲೂ ರೈತರಿಗೆ ಬ್ಯಾಂಕ್‌ಗಳಿಂದ ನೋಟಿಸ್

### ಸೋಮಗುದ್ದು ರಂಗಸ್ವಾಮಿ ಆಕ್ರೋಶ



» **ಚಳ್ಳಕೆರೆ**

ರಾಜ್ಯ ಸರ್ಕಾರ ಪ್ರತಿಯೊಂದು ಹಂತದಲ್ಲೂ ರೈತರ ಬದುಕಿನಲ್ಲಿ ಆಟವಾಡುತ್ತಿದೆ. ಮಳೆ, ಬೆಳೆ ಇಲ್ಲದೆ ಬರಗಾಲವೆಂದು ಸರ್ಕಾರ ಘೋಷಿಸಿದರೂ ರೈತರ ಮನೆ ಬಾಗಿಲಿಗೆ ಬ್ಯಾಂಕ್‌ಗಳಿಂದ ನೋಟಿಸ್ ಬರುತ್ತಿದೆ. ಸರ್ಕಾರ ರೈತರ ಪರವಾಗಿ ಕಾರ್ಯನಿರ್ವಹಿಸುತ್ತಿಲ್ಲವೆಂದು ಅನುಮಾನ ಬಲವಾಗಿದೆ ಎಂದು ಅಖಂಡ ಕರ್ನಾಟಕ ರೈತ ಸಂಘದ ಸಂಸ್ಥಾಪಕ ರಾಜ್ಯಾಧ್ಯಕ್ಷ ಸೋಮಗುದ್ದು ರಂಗಸ್ವಾಮಿ ಅಸಮಧಾನ ಹೊರಹಾಕಿದರು. ನಗರದ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಆಯೋಜಿಸಿದ್ದ ರಾಷ್ಟ್ರೀಯ ರೈತ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಸರ್ಕಾರದ ನಿಯಮಗಳ ಅನುಸಾರ ಇಲಾಖೆ ಈ ಕಾರ್ಯಕ್ರಮ ಆಯೋಜಿಸಿದೆ. ಇದರಿಂದ ರೈತರ ನೆನಪು ಸರ್ಕಾರಕ್ಕೆ ಇದೆ ಎಂಬುವುದು ಖಾತರಿಯಾಗಿದೆ. ಕೇವಲ ಅನಗತ್ಯ ಪ್ರಚಾರಗಳ ಬದಲು ರೈತರ ಸಮೂಹಕ್ಕೆ ನ್ಯಾಯುತವಾಗಿ ದೊರೆಯಬೇಕಾದ ಎಲ್ಲಾ ಸೌಲಭ್ಯ ನೀಡುವಲಿ ಸರ್ಕಾರ ಮುಂದಾಗಬೇಕು ಎಂದರು. ಕೃಷಿಕರು, ನಿವೃತ್ತ ಪ್ರಾಂಶುಪಾಲರಾದ ಎಂ.ಕರಿಯಪ್ಪ ಮಾತನಾಡಿ, ಇತ್ತೀಚಿನ ಬೆಳವಣಿಗೆಗಳ ಹಿನ್ನೆಲೆಯಲ್ಲಿ ರೈತರು ಸೋತುಹೋಗಿದ್ದಾರೆ. ಸರ್ಕಾರದ ಇಬ್ಬಗೆ ನೀತಿ ರೈತರಲ್ಲಿ ಆತಂಕ ಮೂಡಿಸಿದೆ. ಬರಗಾಲದ ಸಂದರ್ಭದಲ್ಲೂ ಸಹ ರೈತರಿಗೆ ನೋಟಿಸ್ ನೀಡುವುದನ್ನು ನಾವು ಯಾವಕಾಲದಲ್ಲೂ ನೋಡಿಲ್ಲ. ಈ ಬಗ್ಗೆ ಜಿಲ್ಲಾಡಳಿತ ಗಂಭೀರ ಚಿಂತನೆ ನಡೆಸಬೇಕು ಎಂದರು.ಕಾರ್ಯಕ್ರಮದಲ್ಲಿ ಜಿಲ್ಲಾ ಕೆಡಿಪಿ ಸದಸ್ಯ ಓ.ತಬಲರಂಗಸ್ವಾಮಿ, ರೈತ ಸಂಘ ತಾಲ್ಲೂಕು ಅಧ್ಯಕ್ಷ ಚಿಕ್ಕಣ್ಣ, ಮೂಡಲಗಿರಿಯಪ್ಪ ಮುಂತಾದವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಪ್ರಾರಂಭದಲ್ಲಿ ಕೃಷಿ ಇಲಾಖೆ ಅಧಿಕಾರಿ ತಿಪ್ಪೇಸ್ವಾಮಿ ಎಲ್ಲರನ್ನೂ ಸ್ವಾಗತಿಸಿ, ವಂದಿಸಿದರು.




**ಚಳ್ಳಕೆರೆ ನಗರದ ಈ–ಕಿಡ್ಸ್ ಪ್ರೀ ಸ್ಕೂಲ್‌ನಲ್ಲಿ ರಾಷ್ಟ್ರೀಯ ರೈತ ದಿನಾಚರಣೆ ಅಂಗವಾಗಿ ಪುಟಾಣಿ ಮಕ್ಕಳು ವಿವಿಧ ರೈತ ವೇಷದಲ್ಲಿ ಕಾಣಿಸಿಕೊಂಡರು. ಕಾರ್ಯದರ್ಶಿ ಶಶಿಕುಮಾರ್, ಮುಖ್ಯ ಶಿಕ್ಷಕಿ ಪುಷ್ಪಲತಾ, ಶಿಕ್ಷಕರಾದ ವೀಣಾ, ಶಾಂತ, ಸಾವಿತ್ರ, ಸ್ಫೂರ್ತಿ ಇದ್ದರು.**

## ಶಿವನ ಲಿಂಗಾಕಾರದಲ್ಲಿ ಆಂಜನೇಯ, ವೆಂಕಟೇಶ್ವರ


» **ಚಳ್ಳಕೆರೆ**


ಪ್ರತಿವರ್ಷದಂತೆ ಈ ವರ್ಷವೂ ನಾಯಕನಹಟ್ಟಿ ರಸ್ತೆಯ ಕರೇಕಲ್ ಶ್ರೀಆಂಜನೇಯಸ್ವಾಮಿ ದೇವಸ್ಥಾನದಲ್ಲಿ ಹನುಮ ಜಯಂತಿ ಕಾರ್ಯಕ್ರಮವನ್ನು ಸಾವಿರಾರು ಭಕ್ತರ ಸಮ್ಮುಖದಲ್ಲಿ ಭಕ್ತಿ, ಶ್ರದ್ದೆಯಿಂದ ನಡೆಸಲಾಯಿತು.

ಈ ಬಾರಿಯ ಹನುಮ ಜಯಂತಿ ವಿಶೇಷವೆಂದರೆ ದೇವಸ್ಥಾನದಲ್ಲಿರುವ ಶ್ರೀಆಂಜನೇಯಸ್ವಾಮಿಗೆವಿಶೇಷಅಲಂಕಾರವನ್ನು ಮಾಡಿದ್ದು, ಶಿವನ ಆಕಾರದಲ್ಲಿ ಮಾರುತಿ ಮತ್ತು ಶ್ರೀವೆಂಕಟೇಶ್ವರಸ್ವಾಮಿಯ ದರ್ಶನವನ್ನು ಮಾಡಿಸುವ ಮೂಲಕ ಆಗಮಿಸಿದ್ದ ಎಲ್ಲಾ ಭಕ್ತರಿಗೆ ಶಿವ, ಮಾರುತಿ, ವೆಂಕಟೇಶನ ಅನುಗ್ರಹವನ್ನು ಪಡೆಯುವಂತೆ ಮಾಡಲಾಯಿತು. ವೇದಬ್ರಹ್ಮ ನಾಗಶಯನ ಗೌತಮ್ ಪೂಜಾ, ಹವನ, ಹೋಮ ನಡೆಸಿದ್ದು ಹೇಮಂತ್‌ಗೌತಮ್ ಮತ್ತು ಪ್ರಕಾಶ್ ವಿಶೇಷ ಹೂವಿನ ಅಲಂಕಾರವನ್ನು ಮಾಡಿದ್ದರು.

ಬೆಳಗಿನಿಂದಲೇ ವಿಶೇಷ ಪೂಜಾ ಕಾರ್ಯಕ್ರಮ ಆರಂಭವಾಗಿದ್ದು, ಜನರ ಕಲ್ಯಾಣಕ್ಕಾಗಿ ಹೋಮ ಹಾಗೂ ಪೂಜಾಧಿಗಳನ್ನು ನಡೆಸಲಾಯಿತು. ಮಹಿಳೆಯರಿಂದ ಭಜನಾ ಕಾರ್ಯಕ್ರಮ ನಡೆದವು. ನಂತರ ಶ್ರೀಆಂಜನೇಯಸ್ವಾಮಿಗೆ ಅಷ್ಟೋತ್ತರ ಪೂಜಾ ಸೇವೆ ನಡೆಯಿತು. ತಾಲ್ಲೂಕು ಬ್ರಾಹ್ಮಣ ಸಂಘದ ಅಧ್ಯಕ್ಷ ಡಾ.ಅನಂತರಾಮ್‌ಗೌತಮ್, ಪ್ರದೀಪ್‌ಶರ್ಮ, ಪ್ರವೀಣ್‌ಶರ್ಮ, ಭೀಮರಾಜ್, ಸಿ.ಎಸ್.ಗೋಪಿನಾಥ, ಜೆ.ಎಸ್.ಶ್ರೀನಾಥಶರ್ಮ ಮುಂತಾದವರು ಪೂಜಾ ಕಾರ್ಯದಲ್ಲಿ ಪಾಲ್ಗೊಂಡಿದ್ದರು. ನಗರದ ಪರಿಮಳ ಏಜೆನ್ಸಿ ವತಿಯಿಂದ ಆಗಮಿಸಿದ್ದ ಭಕ್ತರಿಗೆ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು.

ನಗರದ ಅಜ್ಜಯ್ಯಗುಡಿ ರಸ್ತೆಯಲ್ಲಿನ ಆಂಜನೇಯಸ್ವಾಮಿ ದೇವಸ್ಥಾನದಲ್ಲಿ ಹನುಮಜಯಂತಿ ಹಿನ್ನೆಲೆಯಲ್ಲಿ ವಿಶೇಷ ಪೂಜಾ ಕಾರ್ಯ ನಡೆದವು.





**ಪ್ರಮುಖ ಸುದ್ದಿ**

### ರಾಜ್ಯದ ಶಿಕ್ಷಣ ಕ್ಷೇತ್ರವನ್ನು ಸಂಪೂರ್ಣವಾಗಿ ಕಾರ್ಗತ್ತಲ್ಲಿಟ್ಟ ಕೀರ್ತಿ ಕಾಂಗ್ರೆಸ್ ಸರ್ಕಾರದ್ದು

# ಶಿಕ್ಷಣ ಇಲಾಖೆಯ ಅಭಿವೃದ್ದಿಗೆ ಸರ್ಕಾರವೇ ಅಡ್ಡಗಾಲು

» **ಚಳ್ಳಕೆರೆ**

ಕಳೆದ ಏಳು ತಿಂಗಳಿನಿಂದ ರಾಜ್ಯದಲ್ಲಿಅಧಿಕಾರ ನಡೆಸುತ್ತಿರುವ ಕಾಂಗ್ರೆಸ್ ನೇತೃತ್ವದ ಸರ್ಕಾರ ಶಿಕ್ಷಣ ಕ್ಷೇತ್ರದ ಸರ್ವತೋಮುಖ ಅಭಿವೃದ್ದಿ ಪ್ರಾಮಾಣಿಕ ಪ್ರಯತ್ನ ಮಾಡಿಲ್ಲ. ಅತಿಥಿ ಉಪನ್ಯಾಸಕರ ಸಮಸ್ಯೆಯನ್ನು ಬಗೆಹರಿಸುವಲ್ಲಿ ನಿರ್ಲಕ್ಷ್ಯ ತೋರಿದೆ. ಬಿಜೆಪಿ ಆಡಳಿತದಲ್ಲಿ ಸುಮಾರು 8900 ನೂತನ ಕೊಠಡಿಗಳನ್ನು ವಿವೇಕಾ ಯೋಜನೆಯಡಿ ನಿರ್ಮಿಸಲಾಯಿತು. 9 ಸಾವಿರ ಅತಿಥಿ ಉಪನ್ಯಾಸಕರ ವೇತನವನ್ನು 12ಸಾವಿರದಿಂದ 28 ಸಾವಿರಕ್ಕೆ ಏರಿಕೆ ಮಾಡಲಾಯಿತು.ಆದರೆ,ಕಾಂಗ್ರೆಸ್‌ಸರ್ಕಾರ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಶಿಕ್ಷಣ ಕ್ಷೇತ್ರದ ಅಧೋಗತಿಗೆ ಪ್ರಮುಖ ಕಾರಣಕರ್ತರಾಗಿದ್ದಾರೆಂದು ಆಗ್ನೇಯ ಪದವೀಧರ ಕ್ಷೇತ್ರದ ವಿಧಾನಪರಿಷತ್ ಸದಸ್ಯ ವೈ.ಎ.ನಾರಾಯಣಸ್ವಾಮಿ ತಮ್ಮ ಅಸಮದಾನವನ್ನು ವ್ಯಕ್ತಪಡಿಸಿದರು.

ನಗರದ ಪ್ರವಾಸಿಮಂದಿರದಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಶಿಕ್ಷಣ ಕ್ಷೇತ್ರದಲ್ಲಿ ಅಭಿವೃದ್ದಿಗೆ ಪೂರಕವಾಗಿದ್ದ ಪಠ್ಯವನ್ನು ಬದಲಾವಣೆ ಮಾಡಲೊರಟರು, ಇದುವರೆಗೂ ಶಿಕ್ಷಕ ಹುದ್ದೆ ಭರ್ತಿಯಾಗಿಲ್ಲ. ರಾಜ್ಯದ 403 ಪದವಿ ಕಾಲೇಜುಗಳ ಪ್ರಾಂಶುಪಾಲರ ಹುದ್ದೆ ಖಾಲಿ ಇವೆ, ಪದವಿ ಕಾಲೇಜಿನಲ್ಲಿ 5500 ಪ್ರಾಧ್ಯಾಪಕರ ಹುದ್ದೆ ಖಾಲಿ, ಒಟ್ಟಾರೆ ಶೇ.60ರಷ್ಟು ಪಾಠಗಳಾಗಿಲ್ಲ, ವಿದ್ಯಾರ್ಥಿಗಳು ಪರೀಕ್ಷೆ ಬರೆಯುವುದಾದರೂ ಏನು ಎಂದು ಪ್ರಶ್ನಿಸಿದರು.



ರಾಜ್ಯದ ಅತಿಥಿ ಉಪನ್ಯಾಸಕರ ಹೋರಾಟಕ್ಕೆ ನಾನು ಸದಾಬೆಂಬಲ ನೀಡುತ್ತಾ ಬಂದಿದ್ದೇನೆ, ಇತ್ತೀಚೆಗೆ ಶಿಕ್ಷಣ ಸಚಿವರು ಅತಿಥಿ ಉಪನ್ಯಾಸಕರಿಗೆ ಗದರಿಹಾಕಿ ಪಾಠಮಾಡಿದರೆ ಮಾತ್ರ ಸಂಬಂಳಕೊಡುತ್ತೇವೆ ಎಂದಿರುವುದು ಸರಿಯಲ್ಲ, ಇದನ್ನು ನಾನು ಖಂಡಿಸುವೆ. ಒಟ್ಟಾರೆ ಶಿಕ್ಷಣ ಕ್ಷೇತ್ರವನ್ನು ಕತ್ತಲಲ್ಲಿಟ್ಟ ಖ್ಯಾತಿ ಕಾಂಗ್ರೆಸ್ ಪಕ್ಷದ ಸರ್ಕಾರದ್ದು ಎಂದರು. ಚುನಾವಣಾ ಸಂದರ್ಭದಲ್ಲಿ ಎನ್‌ಪಿಎಸ್ ತೆಗೆದು, ಒಪಿಎಸ್ ಜಾರಿಗೆ ತರುವ ಭರವಸೆ ನೀಡಿದ್ದರು. ಏಳನೇ ವೇತನ ಆಯೋಗ ಜಾರಿಗೆ ತರುವ ಆಶ್ವಾಸನೆ ನೀಡಿದ್ದರು ಆದರೆ ಯಾವುದೂ ಆಗಿಲ್ಲ. ಈ ಸರ್ಕಾರದ ವಿಶೇಷವೆಂದರೆ ಕಾಂಗ್ರೆಸ್ ಪಕ್ಷದ ಶಾಸಕರೇ ಸರ್ಕಾರದ ಧೋರಣೆಯನ್ನು ಖಂಡಿಸುತ್ತಿದ್ದಾರೆ. ಗ್ಯಾರಂಟಿಗಳ ಗಲಾಟೆಯಲ್ಲಿ ಯಾವ ಶಾಸಕನಿಗೂ ಅಭಿವೃದ್ದಿಗೆ ಹಣ ನೀಡದೆ ಕಾಂಗ್ರೆಸ್ ಸರ್ಕಾರ ಅನ್ಯಾಯ ಮಾಡುತ್ತಿದ್ದು ಸ್ವಪಕ್ಷದ ಶಾಸಕರೇ ಕಾಂಗ್ರೆಸ್ ಪಕ್ಷದ ಗೆಲುವಿಗೆ ಮುಂದಿನ ಚುನಾವಣೆಯಲ್ಲಿ ಅಡ್ಡಿಯಾಗುವರು ಎಂದರು.

2024ರ ಜೂನ್ ತಿಂಗಳಲ್ಲಿ ಆಗ್ನೇಯ ಪದವೀಧರ ಕ್ಷೇತ್ರದ ಚುನಾವಣೆ ನಡೆಯಲಿದ್ದು ನಾನು ನಾಲ್ಕನೇ ಬಾರಿಗೆ ಬಿಜೆಪಿ ಅಭ್ಯರ್ಥಿಯಾಗಿ ಸ್ಪರ್ಧಿಸುತ್ತಿದ್ದೇನೆ. ಕಳೆದ18ವರ್ಷಗಳಿಂದಶಿಕ್ಷಕರಸಮಸ್ಯೆಗಳಿಗೆ ಸಕರಾತ್ಮಕವಾಗಿ ಸ್ಪಂದಿಸಿದ್ದೇನೆ. ಪ್ರಸ್ತುತ ಚಳ್ಳಕೆರೆ ತಾಲ್ಲೂಕು ಸೇರಿದಂತೆ ಒಟ್ಟು 21 ಸಾವಿರ ಮತಗಳಿದ್ದು ಆ ಪೈಕಿ 15 ಸಾವಿರ ಮತದಾರರು ನಮ್ಮ ಪರವಾಗಿದ್ದಾರೆಂದರು. ಈ ಬಾರಿಯೂ ಗೆಲುವು ವಿಶ್ವಾಸವಿದೆ. ಲೋಕಸಭಾ ಚುನಾವಣೆಯಲ್ಲೂ ಸಹ ಮತ್ತೊಮ್ಮೆ ಮೋದಿ ಜನಪ್ರಿಯತೆಯಿಂದ 350 ಸ್ಥಾನಗಳನ್ನು ಗಳಿಸಿ ಮೋದಿ ಪ್ರಧಾನಿಯಾಗಿ ಮುಂದುವರೆಯುವರು ಎಂಭ ಆಶಾಭಾವನೆ ವ್ಯಕ್ತಪಡಿಸಿದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T